ಸಂಪುಟ : 10 ಸಂಚಿಕೆ: 47 ಪುಟ : 4+2 ಬೆಲೆ: 3.00 ಗುರುವಾರ ಮಾರ್ಚ್ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ




ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 47 Pages : 4+2 Price : 3.00 Thursday March 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರವಿ ಗುಂಜೀಕರ್‌ಗೆ ಗೌರವ ಡಾಕ್ಟರೇಟ್

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರು ಹಾಗೂ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರವಿ ಗುಂಜೀಕರ ಅವರ ಸಾಮಾಜಿಕ ಸೇವೆ, ಸರಕಾರಿ ನೌಕರರ ಸಮಸ್ಯೆಗಳ ಕುರಿತು ನಡೆಸಿದ ಹೋರಾಟ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಸೌಥ್ ವೆಸ್ಟರ್ನ್ ಅಮೇರಿಕನ್ ಯುನಿವರ್ಸಿಟಿ ಗೌರವ ಡಾಕ್ಟರೇಟ್ ಪದವಿ ನೀಡಿದೆ.

ಡಾ. ರವಿ ಗುಂಜೀಕರರಿಗೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಮತ್ತು ಜಿಲ್ಲಾ ಸಂಘದ ಪದಾಧಿಕಾರಿಗಳು ಹಾಗೂ ಅಭಿಮಾನಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್-20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 22ರಲ್ಲಿ ಗಂಗಿಮಡಿ 1 ರಿಂದ 5 ಲೈನ್‌ಗಳು ಉಳಿದ ಕೆಲವು ಭಾಗಗಳು ವಾರ್ಡ್ ನಂ. 29, ರಾಜೀವಗಾಂಧಿ ನಗರ, ಪರಶು ಅವರ ಲೈನ್, ಬನ್ನಿಕಟ್ಟಿ, ಡಂಬಳ, ಉಳಿದ ಭಾಗಗಳು ವಾರ್ಡ್ ನಂ. 2ರಲ್ಲಿ ಸೆಟ್ಲಮೆಂಟ್, ಗಾಂಧಿನಗರ, ಹನಮಂತ ದೇವರ ಗುಡಿ, ಸಬ್ ಜೈಲ್ ರೋಡ್, ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 18, 19, 25 ರಲ್ಲಿ ಹಾವನೂರ ಅವರ ಲೈನ್, ಬಾವಿಯವರ ಲೈನ್, ಕಾಗದಗೇರಿ ಅವರ ಲೈನ್, ಭಟ್ಟರ ಲೈನ್, ಗುಂಜೀನವರ, ವೀರನಾರಾಯಣ ರಸ್ತೆ ಉಳಿದ ಭಾಗಗಳು. ವಾರ್ಡ್ ನಂ. 7ರಲ್ಲಿ ಪಂಚಲಕ್ಷ್ಮೀ ಬಡಾವಣೆ, ಶಿವಾಜಿನಗರ, ರಂಗಪ್ಪಜ್ಜನ ಮಠ ಉಳಿದ ಭಾಗಗಳು.

**ಪ್ರಕಟಣೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಕಾಲ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚನೆ

# ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಸಕಾಲ ಯೋಜನೆಯಡಿ ಸ್ವೀಕರಿಸಲಾದ ಅರ್ಜಿಗಳ ವಿಲೇವಾರಿಯಲ್ಲಿ ವಿನಾಕಾರಣ ವಿಳಂಬವಾಗಬಾರದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಸಕಾಲ ಯೋಜನೆಯ ಜಿಲ್ಲಾ ಮಟ್ಟದ ವಿವಿಧ ಇಲಾಖಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಕಾಲದಲ್ಲಿ ಅರ್ಜಿ ಸ್ವೀಕರಿಸುವಾಗ ಅರ್ಜಿಯ ಜೊತೆಗೆ ನಿಗದಿಪಡಿಸಿದ ದಾಖಲಾತಿಗಳ ಸಮೇತ ಸ್ವೀಕರಿಸಬೇಕು. ಸಕಾಲ ಯೋಜನೆಯಡಿ ಇಲಾಖೆಗಳಿಗೆ ನಿಗದಿಪಡಿಸಿದ ಯೋಜನೆಗಳಲ್ಲಿ ಕಡ್ಡಾಯವಾಗಿ ಅರ್ಜಿಗಳನ್ನು ಸ್ವೀಕರಿಸಬೇಕು. ಕೆಲವು ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಬೇಕು ಎಂದರು.



ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸುವ ಉದ್ದೇಶದಿಂದ ಸಕಾಲ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, ಈ ಕುರಿತು ಹೆಚ್ಚು ನಿಗಾ ವಹಿಸುವ ಮೂಲಕ ಯೋಜನೆಯನ್ನು ಯಶಸ್ವಿಗೊಳಿಸಬೇಕು. ಸಕಾಲ ಯೋಜನೆಯ ಜಿಲ್ಲಾ ಮಟ್ಟದ ಸಭೆಗೆ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು. ಆರೋಗ್ಯ, ಕೃಷಿ, ಕಾರ್ಮಿಕ ಇಲಾಖೆ ಸೇರಿದಂತೆ ವಿವಿಧ ಇಲಾಖೆಯವರು ಸಕಾಲ ಯೋಜನೆಯ ಅರ್ಜಿಗಳ ಕುರಿತು ಹೆಚ್ಚಿನ ಶ್ರಮ ವಹಿಸಿ ಶೀಘ್ರ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಇಲಾಖೆಯ ಅಧಿಕಾರಿಗಳು ಸಕಾಲ ಯೋಜನೆಯಡಿ ಸ್ವೀಕರಿಸಿದ ಅರ್ಜಿಗಳ ವಿಲೇವಾರಿಗೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ, ಯುವಜನ ಸಬಲೀಕರಣ ಮತ್ತುಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಸಕಾಲದಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ನಿಗದಿಪಡಿಸಿದ ವೇಳೆಯಲ್ಲಿ ವಿಲೇವಾರಿ ಮಾಡದಿದ್ದಲ್ಲಿ ಇಲಾಖೆಯ ಅಧಿಕಾರಿಗಳೇ ಹೊಣೆಗಾರರಾತ್ತಾರೆ ಹಾಗೂ ಶಿಸ್ತು ಕ್ರಮಕ್ಕೆ ಒಳಗಾಗಬೇಕಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

### ನ್ಯಾಯಬೆಲೆ ಅಂಗಡಿಗಳಲ್ಲಿ ಇನ್ನು ಮುಂದೆ ಹಣ ಬದಲಾಗಿ ಅಕ್ಕಿ

# ತಾಲೂಕಿನಲ್ಲಿ 24,845 ಅರ್ಹ ಫಲಾನುಭವಿಗಳು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಯ ಅರ್ಹ ಪಡಿತರ ಚೀಟಿದಾರರಿಗೆ ಈ ಹಿಂದೆ ಕುಟುಂಬದ ಸದಸ್ಯರಿಗೆ ಅನುಗುಣವಾಗಿ ಅಕ್ಕಿ ಬದಲಾಗಿ ಹಣ ವರ್ಗಾವಣೆ ಮಾಡಲಾಗುತ್ತಿತ್ತು. ಇದೀಗ ಫೆಬ್ರುವರಿ-2025ರಿಂದ ಅನ್ವಯವಾಗುವಂತೆ ಹಣದ ಬದಲಾಗಿ ಅಕ್ಕಿ ವಿತರಣೆಗೆ ಮುಂದಾಗಿದ್ದು, ಶಿರಹಟ್ಟಿ ತಾಲೂಕಿನಲ್ಲಿ 24,845 ಅರ್ಹ ಫಲಾನುಭವಿಗಳು ಇದರ ಸೌಲಭ್ಯ ಪಡೆಯಲಿದ್ದಾರೆ.

ಫೆಬ್ರವರಿ-25 ಮಾಹೆಯಲ್ಲಿ ವಿತರಿಸಬೇಕಾದ ಅಕ್ಕಿ ಪ್ರಮಾಣವನ್ನು ಸೇರಿ ಮಾರ್ಚ್-2025ರ ಮಾಹೆಯಲ್ಲಿ ಅಂತ್ಯೋದಯ ಪಡಿತರ ಚೀಟಿದಾರರಿಗೆ ಕನಿಷ್ಠ 4 ಜನ ಸದಸ್ಯರನ್ನು ಹೊಂದಿದ ಕುಟುಂಬಕ್ಕೆ ಹೆಚ್ಚುವರಿಯಾಗಿ ಫೆಬ್ರವರಿ-2025ರ 5 ಕೆಜಿ, ಮಾರ್ಚ್-2025ರ 5 ಕೆಜಿ, ಎನ್‌ಎಫ್‌ಎಸ್‌ಎ ಮಾರ್ಚ್-2025ರ 35 ಕೆಜಿ ಹೀಗೆ ಒಟ್ಟು 45 ಕೆಜಿ, ಗರಿಷ್ಠ 12 ಜನ ಸದಸ್ಯರಿಗೆ ಒಟ್ಟು 205 ಕೆಜಿ ಅಕ್ಕಿ ಸಿಗಲಿದೆ. ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೂ ಸಹ ಅನ್ನಭಾಗ್ಯದ ಫೆಬ್ರವರಿ-2025ರ 5 ಕೆಜಿ, ಮಾರ್ಚ್-2025ರ 5 ಕೆಜಿ, ಎನ್‌ಎಫ್‌ಎಸ್‌ಎಎ ಮಾರ್ಚ್-2025ರ 5 ಕೆಜಿ ಹೀಗೆ 15 ಕೆಜಿ ಅಕ್ಕಿ ಸಿಗಲಿದೆ.

> ಈ ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ ಅನಿಲ ಬಡಿಗೇರ, ಈಗಾಗಲೇ ನ್ಯಾಯಬೆಲೆ ಅಂಗಡಿಕಾರರ ಸಭೆ ನಡೆಸಿ ಸಾರ್ವಜನಿಕರಿಗೆ ಸರಕಾರ ಕೊಡಮಾಡುವ ಹೆಚ್ಚುವರಿ ಅಕ್ಕಿಯನ್ನು ಸಮರ್ಪಕವಾಗಿ ವಿತರಣೆ ಮಾಡಲು ಸೂಚಿಸಿದೆ ಎಂದರು.



ಶಿರಹಟ್ಟಿ ತಾಲೂಕಿನಲ್ಲಿ 36 ನ್ಯಾಯಬೆಲೆ ಅಂಗಡಿಗಳಲ್ಲಿ ತಾಲೂಕಿನಲ್ಲಿಯ ಅರ್ಹ ಪಡಿತರ ಚೀಟಿದಾರರಿಗೆ ಸರಕಾರ ಕೊಡಮಾಡಿರುವ ಫೆಬ್ರವರಿ ಮತ್ತು ಮಾರ್ಚ್ ತಿಂಗಳುಗಳಲ್ಲಿ ನೀಡಬೇಕಿದ್ದ ಅಕ್ಕಿಯನ್ನು ಏಕಕಾಲದಲ್ಲಿ ನೀಡಲು ಸಿದ್ಧತೆ ಮಾಡಿಕೊಂಡಿದ್ದು, ಮಾಹೆಯ 1ನೇ ತಾರೀಖಿನಿಂದ ತಿಂಗಳ ಕೊನೆಯವರೆಗೆ ಬೆಳಿಗ್ಗೆ 7ರಿಂದ ರಾತ್ರಿ 8 ಗಂಟೆಯವರೆಗೆ ಪಡಿತರ ವಿತರಣೆ ನಡೆಯಲಿದೆ. ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರುಗಳು ಇ-ಕೆವೈಸಿ ಮಾಡಿದ ತಕ್ಷಣವೇ ಪಡಿತರ ಪಡೆಯಲು ಸೂಚನೆ ನೀಡಿದ್ದಾರೆ. ಇ-ಕೆವೈಸಿ ಮಾಡಿಸಲು ಪಡಿತರ ಚೀಟಿದಾರರು ಯಾವುದೇ ಶುಲ್ಕವನ್ನು ನೀಡುವಂತಿಲ್ಲ. ಪಡಿತರ ವಿತರಣೆ ಕುರಿತು ದೂರುಗಳು ಇದ್ದಲ್ಲಿ ಸಹಾಯವಾಣಿ ಸಂಖ್ಯೆ: 1967ಗೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ.


> ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಪಡಿತರ ಚೀಟಿದಾರರಿಗೆ ವಿತರಿಸುವ ಅಕ್ಕಿಯ ಪ್ರಮಾಣದ ಮಾಹಿತಿಯನ್ನು ನಾಮಫಲಕಗಳಲ್ಲಿ ಅಳವಡಿಸಲಾಗಿದೆ. ತಾಲೂಕಿನಲ್ಲಿ ಈಗಾಗಲೇ ಶೇ.99ರಷ್ಟು ಇ-ಕೆವೈಸಿ ಆಗಿದ್ದು, ಎಲ್ಲ ಪಡಿತರ ಅಂಗಡಿಗಳಲ್ಲೂ ವಿತರಣೆ ಕಾರ್ಯ ಪ್ರಗತಿಯಲ್ಲಿದೆ.
>
> **- ಮಂಜುಳಾ ಆಕಳದ.**
> **ಆಹಾರ ನಿರೀಕ್ಷಕಿ.**

### ನಂದೀಶ್ವರ ನಗರದ ನಾಗರಿಕರ ಸಂಘ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ನಂದೀಶ್ವರ ನಗರದ ಸಮಗ್ರ ಅಭಿವೃದ್ಧಿಗೆ ಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಂದೀಶ್ವರ ನಗರದ ನಿವಾಸಿಗಳ ಬೇಡಿಕೆಗಳನ್ನು ಈಡೇರಿಸುವ ಮೂಲಕ ಈ ನಗರ ಸರ್ವಾಂಗ ಸುಂದರವಾಗಿ ರೂಪುಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿ ಕ್ರಮ ಜರುಗಿಸುವದಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.




ಅವರು ನಂದೀಶ್ವರ ನಗರದ 2 ಮತ್ತು 3ನೇ ಕ್ರಾಸ್ (ಇಂಡೋರ್ ಸ್ಟೇಡಿಯಂ ಬಡಾವಣೆಯ) ನಾಗರಿಕರ ವಿವಿಧೋದ್ದೇಶಗಳ ಸಂಘವನ್ನು ಉದ್ಘಾಟಿಸಿ ಮಾತನಾಡಿದರು.

ಸುಶಿಕ್ಷಿತರೂ, ಪ್ರಜ್ಞಾವಂತರೂ ನೆಲೆಸಿರುವ ನಂದೀಶ್ವರ ನಗರವನ್ನು ಅಭಿವೃದ್ಧಿಪಡಿಸಿ ಮಾದರಿ ನಗರವನ್ನಾಗಿಸಲು ನಾವೆಲ್ಲರೂ ಸೇರಿ ಕೆಲಸ ಮಾಡೋಣ. ಜೊತೆಗೆ ಇಂಡೋರ್ ಸ್ಟೇಡಿಯಂನ ಮೆರಗನ್ನು ಹೆಚ್ಚಿಸಲು ಶ್ರಮಿಸೋಣ ಎಂದರು.

ನಂದೀಶ್ವರ ನಗರದ 3ನೇ ಕ್ರಾಸ್‌ನ ರಸ್ತೆ ಬಹಳಷ್ಟು ಹಾಳಾಗಿದ್ದು, ತೆಗ್ಗು-ದಿಣ್ಣೆಗಳಿಂದಾಗಿ ವಾಹನ, ಜನ ಸಂಚರಿಸಲು ಬಾರದಂತಾಗಿದೆ. ಈ ರಸ್ತೆಯನ್ನು ತ್ವರಿತವಾಗಿ ಸಿಮೆಂಟ್ ರಸ್ತೆಯನ್ನಾಗಿ ಮಾಡಬೇಕು, ನಂದೀಶ್ವರ ನಗರಕ್ಕೆ ಒಂದು ಸುಂದರವಾದ ಉದ್ಯಾನವ ನಿರ್ಮಿಸಬೇಕು, ಶಾಲೆ ಹಾಗೂ ದೇವಸ್ಥಾನ ಇರುವ ವಸತಿ ಪ್ರದೇಶದಲ್ಲಿ ಬಾರ್ ಆ್ಯಂಡ್ ರೆಸ್ಟೋರೆಂಟ್ ಆರಂಭವಾಗಿದ್ದು, ಇದನ್ನು ಬೇರೆಡೆ ಸ್ಥಳಾಂತರಿಸಲು ಅಗತ್ಯ ಕ್ರಮ ಜರುಗಿಸಬೇಕೆಂದು ಸಂಘವು ಸಚಿವರಿಗೆ ಮನವಿ ಸಲ್ಲಿಸಿತು. ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ವಿಶ್ವನಾಥರೆಡ್ಡಿ ಗದ್ದಿಕೇರಿ ವಹಿಸಿದ್ದರು. ಸಂಘದ ಗೌರವ ಅಧ್ಯಕ್ಷ ಜಿ.ಎಸ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೆ.ವ್ಹಿ. ಹಿರೇಮಠ ಸ್ವಾಗತಿಸಿದರು, ಗೌರವ ಕಾರ್ಯದರ್ಶಿ ಬಸವರಾಜ ಎಚ್.ಕೊರ್ಲಹಳ್ಳಿ ನಿರೂಪಿಸಿದರು. ಕೊನೆಗೆ ವ್ಹಿ.ಎಸ್. ಶಿವಕಾಳಿಮಠ ವಂದಿಸಿದರು.

> ಮನವಿ ಸ್ವೀಕರಿಸಿದ ಸಚಿವರು, ಬಡಾವಣೆಯ ಸೌಕರ್ಯಗಳ ಬೇಡಿಕೆಗಳ ಕುರಿತು ಸಂಬಂಧಿಸಿದವರಿಗೆ ಸೂಚನೆ ನೀಡಿ ತುರ್ತು ಕ್ರಮ ಜರುಗಿಸುವ ಭರವಸೆ ನೀಡಿದರಲ್ಲದೆ ಸುಂದರ ಉದ್ಯಾನವನ ನಿರ್ಮಾಣಕ್ಕೆ ತಿಂಗಳೊಳಗೆ ಕ್ರಮ ಕೈಗೊಳ್ಳುವದಾಗಿ ಹೇಳಿದರು.

ವೇದಿಕೆಯ ಮೇಲೆ ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ, ಮಾಜಿ ಸದಸ್ಯ ಅನಿಲ ಗರಗ, ಜಿ.ಪಂ ಮಾಜಿ ಸದಸ್ಯ ಸಿದ್ದಲಿಂಗೇಶ ಪಾಟೀಲ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಮಹೇಶ ರಂಗಣ್ಣವರ, ದೇವಪ್ಪ ನಡವಲಗುಡ್ಡ, ಶಿವಾನಂದ ಪಲ್ಲೇದ, ಜೆ.ವ್ಹಿ. ಹಿರೇಮಠ, ಆರ್.ವ್ಹಿ. ಕರವೀರಮಠ, ಡಾ. ಈರಣ್ಣ ಹಳೆಮನಿ, ಕೆ.ವ್ಹಿ. ಯಾಳಗಿಶೆಟ್ರು, ನೀಲಕಂಠಯ್ಯ ಕಳ್ಳಿಮಠ, ಅಶೋಕ ಮಾಳೆಕೊಪ್ಪ, ಡಾ. ಕೃಷ್ಣಾ ನಾವಳ್ಳಿ, ವ್ಹಿ.ವ್ಹಿ. ಕವಲೂರ, ಲಿಂಗರಾಜ ಗೊಲ್ಲರ, ಡಾ.ರವೀಂದ್ರ ನಂದಿ, ಎಸ್.ಜಿ. ಪಲ್ಲೇದ, ಸುಭಾಸ ಗಡಾದ, ವ್ಹಿ.ಎಸ್. ಶಿವಕಾಳಿಮಠ, ಮಂಜುನಾಥ ಗಜಕೋಶ, ಡಿ.ಬಿ. ಚೆನ್ನಶೆಟ್ಟರ ಸೇರಿದಂತೆ ಬಡಾವಣೆಯ ನಿವಾಸಿಗಳು ಪಾಲ್ಗೊಂಡಿದ್ದರು.



## ಸಾಕ್ಷಿ ಸುಭಾಷಿತ

**ಸಾಗರದಲ್ಲಿ ಬಿರುಗಾಳಿ ಜೋರಾದರೆ ದೋಣಿ ಮುಳುಗುತ್ತದೆ. ಬದುಕಿನ ಸಾಗರದಲ್ಲಿ ಅಹಂಕಾರ ಹೆಚ್ಚಾದರೆ ವ್ಯಕ್ತಿತ್ವ ಮುಳುಗುತ್ತದೆ.**

**–ಸುಭಾಷಿತ**

## ಸಂಪಾದಕೀಯ

# ಸರಕಾರಿ ಆಸ್ತಿ ರಕ್ಷಣೆ ಆಗಲಿ

ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಆಸ್ತಿಯನ್ನು ಕಬಳಿಸುತ್ತಿರುವ ಘಟನೆಗಳು ರಾಜ್ಯಾದ್ಯಂತ ಅಲ್ಲಲ್ಲಿ ದಾಖಲಾಗುತ್ತಿವೆ. ಕಂದಾಯ ಇಲಾಖೆ ಅಧಿಕಾರಿಗಳೇ ಈ ಅಕ್ರಮದಲ್ಲಿ ಭಾಗಿಯಾಗಿ ತನಿಖೆ ಎದುರಿಸುತ್ತಿದ್ದಾರೆ. ಈ ಮಧ್ಯೆ ಸರ್ಕಾರಿ ಆಸ್ತಿಗಳ ರಕ್ಷಣೆ, ಒತ್ತುವರಿ ತೆರವಿಗೆ ವಿಶೇಷ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣೆ ಬೈರೇಗೌಡ ಹೇಳಿರುವ ಮಾತುಗಳು ಸರ್ಕಾರಿ ಆಸ್ತಿ ರಕ್ಷಣೆ ವಿಷಯದಲ್ಲಿ ಭರವಸೆ ಮೂಡಿಸಿದೆ.

ವಿಶೇಷವಾಗಿ ಗ್ರಾಮೀಣ ಭಾಗದ ಗೋಮಾಳ ಜಮೀನು ಹಾಗೂ ಕೆರೆ ಒತ್ತುವರಿಯನ್ನು ತೆರವು ಮಾಡುವದಾಗಿ ವಿಧಾನಪರಿಷತ್ ನಲ್ಲಿ ಕೃಷ್ಣಭೈರೇಗೌಡ ಭರವಸೆ ನೀಡಿದ್ದಾರೆ. ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಆಸ್ತಿಯನ್ನು ಬೇರೊಬ್ಬರಿಗೆ ಮಾರಾಟ ಮಾಡದಂತೆ ನಿರ್ಬಂಧಿಸುವ ಕಾನೂನು ಮತ್ತು ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸುವ ಅವಶ್ಯಕತೆಯನ್ನ ಸಚಿವರು ಮುಂದಿಟ್ಟಿದ್ದಾರೆ.

ಬೆಂಗಳೂರು ನಗರ ಒಂದರಲ್ಲಿ 252 ಹೆಚ್ಚು ಒತ್ತುವರೆ ಪ್ರಕರಣಗಳು ದಾಖಲಾಗಿವೆ. ಇನ್ನು ರಾಜ್ಯದ ಎಲ್ಲ ಜಿಲ್ಲೆಗಳನ್ನ ಒಳಗೊಂಡರೆ ಸಾವಿರಾರು ಪ್ರಕರಣಗಳು ದಾಖಲಾಗುತ್ತವೆ. ಗ್ರಾಮೀಣ ಭಾಗದಲ್ಲಿ ಗೋಮಾಳ ಭೂಮಿಯನ್ನು ಬೇಕಾಬಿಟ್ಟಿಯಾಗಿ ಉಳ್ಳವರು ಒತ್ತುವರಿ ಮಾಡಿಕೊಂಡಿದ್ದಾರೆ.

ಸರ್ಕಾರಿ ಆಸ್ತಿಗಳ ರಕ್ಷಣೆ ಪ್ರಥಮ ಆದ್ಯತೆಯಾಗಬೇಕು. ಸರ್ಕಾರಿ ಆಸ್ತಿಗಳ ಒತ್ತುವರಿಯೇ ತೆರವಾಗದಿದ್ದರೆ ಖಾಸಗಿ ಆಸ್ತಿ ಮಾಲೀಕರು ತಮ್ಮ ಆಸ್ತಿ ಉಳಿಸಿಕೊಳ್ಳುವುದು ಸವಾಲಿನ ಕೆಲಸವಾಗಲಿದೆ. ಈ ನಿಟ್ಟಿನಲ್ಲಿ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಲ್ಲಿ ಭವಿಷ್ಯದಲ್ಲಿ, ಸರ್ಕಾರಿ ಜಮೀನು ಸಾರ್ವಜನಿಕರ ಬಳಕೆಗೆ ಮುಕ್ತವಾಗಲಿವೆ.

## ಮಹಿಳೆಯರ ಸ್ವಾವಲಂಬಿ ಜೀವನ ಸಾಕಾರ

# ಪಂಚ ಗ್ಯಾರಂಟಿಯ 'ಶಕ್ತಿ ಯೋಜನೆ'

ಮಹಿಳೆಯರು ನಾಲ್ಕು ಗೋಡೆ ಮಧ್ಯದಲ್ಲಿ ಸಮಾಜದ ಕಟ್ಟುಪಾಡುಗಳಿಗೆ ಜೋತು ಬಿದ್ದು ಸ್ವಾವಲಂಬಿಯಾಗಿ ಓಡಾಡದೇ ಮನೆಯಲ್ಲಿ ಇರುವ ದಿನಗಳನ್ನು ಹಲವಾರು ವರ್ಷಗಳಿಂದ ನಮ್ಮ ಮನೆಯ ಸುತ್ತಮುತ್ತಲಿನ ಪುರುಷ ಪ್ರಧಾನ ಸಮಾಜದಲ್ಲಿ ನೋಡುತ್ತಾ ಬಂದಿದ್ದೇವೆ.

ಕರ್ನಾಟಕ ಸರ್ಕಾರದ 5 ಗ್ಯಾರಂಟಿಗಳಲ್ಲಿ ಒಂದಾದ ಶಕ್ತಿ ಯೋಜನೆಯಡಿ ಸರಕಾರಿ ಬಸ್‌ಗಳಲ್ಲಿ ರಾಜ್ಯಾದ್ಯಂತ ಮಹಿಳೆಯರಿಗೆ ಉಚಿತ ಪ್ರಯಾಣವನ್ನು ನೀಡುತ್ತದೆ. ಶಕ್ತಿ ಯೋಜನೆಯನ್ನು 2023ರ ಜೂನ್ 11ರಂದು ಜಾರಿಗೆ ತರಲಾಯಿತು. ಇದರಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಉತ್ತರ ಪಶ್ಚಿಮ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಪ್ರಯಾಣಿಕರ ಸಂಖ್ಯೆ ಗಗನಕ್ಕೇರಿದೆ.

ಭಾರತವು ಪುರುಷ ಪ್ರಧಾನ ದೇಶವಾಗಿದ್ದು, ಈ ಹಿಂದೆ ಮಹಿಳೆಯರಿಗೆ ಅಷ್ಟಾಗಿ ಆರ್ಥಿಕ ಸ್ವಾತಂತ್ರ್ಯವಿರಲಿಲ್ಲ. ತಮ್ಮ ತವರು ಮನೆಗೆ ಅಥವಾ ತಾವು ಹೋಗಲು ಬಯಸುವ ಪ್ರದೇಶಕ್ಕೆ ಹೋಗಲು ಸಾಧ್ಯವಾಗದೆ ಇರುವ ಎಷ್ಟೋ ಮಹಿಳೆಯರು ಇದ್ದಾರೆ.



ಹಾಗಿರುವಾಗ ಈಗ ಮಹಿಳೆಯರು ಉಚಿತವಾಗಿ ಪ್ರಯಾಣ ಸೌಲಭ್ಯದ ಸದುಪಯೋಗ ಪಡೆಯುತ್ತಿದ್ದಾರೆ.

ಸಾಮಾನ್ಯ ಕುಟುಂಬದ ಮಹಿಳೆಯರು ಯಾವುದೇ ಟಿಕೇಟ್ ದರವನ್ನು ಭರಿಸದೇ ಉಚಿತವಾಗಿ ಪ್ರಯಾಣಿಸಲು ಅನುಕೂಲವಾಗುತ್ತಿದೆ. ಶಾಲಾ–ಕಾಲೇಜು ವಿಧ್ಯಾರ್ಥಿನಿಯರು ವಿಧ್ಯಾರ್ಥಿ ಪಾಸುಗಳನ್ನು ಪಡೆಯದೆ ಉಚಿತವಾಗಿ ಪ್ರಯಾಣಿಸಿ ವಿಧ್ಯಾಭ್ಯಾಸವನ್ನು ಪಡೆಯಲು ಅನುಕೂಲವಾಗಿರುತ್ತದೆ. ಬಡ ಕುಟುಂಬದ ಶಾಲಾ–ಕಾಲೇಜು ವಿದ್ಯಾರ್ಥಿನಿಯರು ಪ್ರಯಾಣ ದರವನ್ನು ಉಳಿತಾಯ ಮಾಡಿ ತಮ್ಮ ವಿಧ್ಯಾಭ್ಯಾಸಕ್ಕೆ ಬಳಿಸಿಕೊಳ್ಳಲು ಅನುಕೂಲವಾಗಿರುತ್ತದೆ. ಮಹಿಳೆಯರು ಪ್ರಯಾಣಿಸುವಾಗ ಭರಿಸುತ್ತಿದ್ದ ಹಣವನ್ನು ಉಳಿತಾಯ ಮಾಡಿ ಬೇರೆ ಕೆಲಸಗಳಿಗೆ ಬಳಸಿಕೊಳ್ಳಲು ಅನುಕೂಲವಾಗಿರುತ್ತದೆ. ಮಹಿಳಾ ಪ್ರಯಾಣಿಕರು ಕರ್ನಾಟಕದ ಎಲ್ಲಾ ಪ್ರವಾಸಿ ತಾಣಗಳಿಗೆ ಹಾಗೂ ದೇವಸ್ಥಾನಗಳಿಗೆ ಭೇಟಿ ನೀಡಲು ಅನುಕೂಲವಾಗಿರುತ್ತದೆ. ರಾಜ್ಯದ ಮಹಿಳೆಯರ ಪೈಕಿ ಶೇ. 60ರಷ್ಟು ಮಹಿಳೆಯರು ಶಕ್ತಿ ಯೋಜನೆಯ ಸದುಪಯೋಗ ಪಡೆದುಕೊಂಡಿರುತ್ತಾರೆ. ಸಾಮಾನ್ಯ ಕುಟುಂಬದ ಮಹಿಳೆಯರು ದೂರ ಮಾರ್ಗಗಳಿಗೆ ಪ್ರಯಾಣಿಸಲು ಅನುಕೂಲವಾಗಿರುತ್ತದೆ. ಗ್ರಾಮಾಂತರ ಪ್ರದೇಶದ ಮಹಿಳೆಯರು ಬೇರೆ ಬೇರೆ ನಗರಗಳಿಗೆ ಹೋಗಿ ಉದ್ಯೋಗ ಮಾಡಲು ಅನುಕೂಲವಾಗಿರುತ್ತದೆ.

ಮದುವೇ ಮುಂಜಿ ಇನ್ನಿತರೆ ಸಮಾರಂಭಗಳಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚಾಗಿರುವುದು ಕಂಡು ಬಂದಿದೆ. ಶಕ್ತಿ ಯೋಜನೆ ಮಹಿಳೆಯರು ಸ್ವಾವಲಂಬಿ ಜೀವನ ಸಾಗಿಸಲು ಹೆಚ್ಚು ಉಪಯುಕ್ತವಾಗಿದೆ. ಗದಗ ಜಿಲ್ಲೆಯಲ್ಲಿ 11–06–2023ರಿಂದ 18–02–2025ರವರೆಗೆ 8,72,96,642 ಮಹಿಳೆಯರು ಶಕ್ತಿ ಯೋಜನೆಯ ಸೌಲಭ್ಯ ಪಡೆದಿದ್ದಾರೆ.

ರಾಜ್ಯದಲ್ಲಿ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಿಂದ ಸಮಾಜದಲ್ಲಿನ ಧನಾತ್ಮಕ ಬದಲಾವಣೆ ಆಗುತ್ತಿವೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷರಾದ ಎಸ್.ಆರ್. ಮೆಹರೋಜ್ ಖಾನ್ ಹೇಳಿದಂತೆ, 5 ಗ್ಯಾರಂಟಿ ಯೋಜನೆಗಳ ಸೌಲಭ್ಯಗಳನ್ನು ರಾಜ್ಯದ ನಾಲ್ಕುವರೆ ಕೋಟಿ ಜನರು ಪಡೆದುಕೊಳ್ಳುತ್ತಿದ್ದಾರೆ. ಶೇ. 98ರಷ್ಟು ಗುರಿ ಸಾಧಿಸಲಾಗಿದೆ ಎಂದೂ ತಿಳಿಸುತ್ತಾರೆ.

ಮಹಿಳೆಯರು ಉಳಿಸುತ್ತಿರುವ ಹಣವನ್ನು ಬಳಕೆ ಚಟುವಟಿಕೆಗಳಿಗೆ ಬಳಸಲಾಗುತ್ತಿದ್ದು, ಇದು ಸರಕಾರದ ಆದಾಯವಾಗಿ ಪರಿಣಮಿಸುತ್ತದೆ ಎಂದು ಅಧ್ಯಯನವು ತಿಳಿಸಿದೆ. ಪಂಚ ಗ್ಯಾರಂಟಿಗಳಲ್ಲಿ ಕರ್ನಾಟಕದ ಬಡ–ಮಧ್ಯಮ ಮಹಿಳೆರಿಗೆ 'ಶಕ್ತಿ ಯೋಜನೆ' ಮಹಿಳಾ ಕಾರ್ಮಿಕರು, ಮಹಿಳಾ ವ್ಯಾಪಾರಸ್ಥರು, ಕಾಯಿಪಲ್ಯ ಮಾರುವವರು ವಲಸೆ ಮಹಿಳಾ ಕಾರ್ಮಿಕರು, ರೈತ ಮಹಿಳೆಯರು ಗ್ರಾಮದಿಂದ ಸಿಟಿ ಮಾರ್ಕೆಟ್‌ಗೆ ಬರುವವರು ಸಣ್ಣ ಪ್ರಮಾಣದ ವಸ್ತುಗಳ ವ್ಯಾಪಾರ ಮಾಡುವವರು ಈ ಯೋಜನೆಯಿಂದ ಸಂತಸ ವ್ಯಕ್ತಪಡಿಸುತ್ತಾರೆ.

ಬಡ, ಮಧ್ಯಮವರ್ಗದ ಕುಟುಂಬಕ್ಕೆ 1–2 ಸಾವಿರ ಮಾಸಿಕವಾಗಿ ಉಳಿತಾಯವಾದರೂ ಕೂಡಾ ಅದು ಅತೀ ದೊಡ್ಡ ಮೊತ್ತವೇ ಆಗುತ್ತದೆ. ಅದರಲ್ಲೂ ಒಂದು ಕುಟುಂಬದಲ್ಲಿ ವಿದ್ಯಾರ್ಥಿನಿಯರು ಇದ್ದರೆ, ಅವರ ಶಾಲಾ ಓಡಾಟದ ಖರ್ಚು ಉಳಿತಾಯವಾಗಲಿದೆ. ಅದು ವಿದ್ಯಾರ್ಥಿನಿಯ ಒಟ್ಟು ಶಿಕ್ಷಣದ ವೆಚ್ಚದಲ್ಲಿ ಕಡಿಮೆಯಾಗಲು ಸಹಾಯಕವಾಗಲಿದೆ.

ಕರ್ನಾಟಕದ ಜಿಎಸ್ಟಿ ಸಂಗ್ರಹಕ್ಕೆ ಕೊಡುಗೆ ನೀಡುತ್ತಿದೆ ಮತ್ತು ಕಾರ್ಮಿಕ ಬಲದಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುತ್ತಿದೆ ಎಂದು ಸರಕಾರಿ ಸ್ವಾಮ್ಯದ ಹಣಕಾಸು ನೀತಿ ಸಂಸ್ಥೆ ನಡೆಸಿದ ಅಧ್ಯಯನವು ತಿಳಿಸಿದೆ. ಇತ್ತೀಚಿನ ಅಧ್ಯಯನದ ಪ್ರಕಾರ, 'ಶಕ್ತಿ ಯೋಜನೆ'ಯು ಹೆಚ್ಚಿನ ಮಹಿಳೆಯರು ಉದ್ಯೋಗ ಚಟುವಟಿಕೆಗಳಲ್ಲಿ ಭಾಗವಹಿಸಲು ಕೊಡುಗೆ ನೀಡುತ್ತಿದೆ.

**– ರಾಘವೇಂದ್ರ ಶಾಂತಗೇರಿ.**
**ಅಪ್ರೆಂಟಿಸ್, ವಾರ್ತಾ ಇಲಾಖೆ–ಗದಗ.**

> ಬಡಜನರ ಬದುಕಿನಲ್ಲಿ ಬದಲಾವಣೆ ತರುವ ಯೋಜನೆಗಳು ಪಂಚ ಗ್ಯಾರಂಟಿ ಯೋಜನೆಗಳಾಗಿವೆ. ಗ್ಯಾರಂಟಿ ಸಮಿತಿ ಸದಸ್ಯರು ಅಧಿಕಾರಿಗಳು ಸಮರ್ಪಕ ಅನುಷ್ಠಾನ ಮಾಡುವ ಮೂಲಕ ಬಡವರ ಬದುಕು ಬಂಗಾರವಾಗಿಸಿ.
>
> **– ಡಾ. ಎಚ್.ಕೆ. ಪಾಟೀಲ.**
> **ಗದಗ ಜಿಲ್ಲಾ ಉಸ್ತುವಾರಿ ಸಚಿವರು.**

> ಹಿಂದುಳಿದ, ಪ.ಜಾ ಮತ್ತು ಪ.ಪಂಗಡ, ಅಲ್ಪಸಂಖ್ಯಾತರ, ಮಹಿಳೆಯರು ಮತ್ತು ಮಕ್ಕಳಿಗಾಗಿ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದಿಂದ ಅನುಷ್ಠಾನಿತ ಯೋಜನೆಗಳ ಸೌಕರ್ಯ ಅರ್ಹರಿಗೆ ತಲುಪುತ್ತಿದೆ. ತಾಲೂಕುಗಳಲ್ಲಿ ಗ್ಯಾರಂಟಿ ಯೋಜನೆಗಳ ಸೌಲಭ್ಯ ವಿತರಣೆಗೆ ಸಮಸ್ಯೆಗಳೇನಾದರೂ ಇದ್ದಲ್ಲಿ ತಾಲೂಕಾ ಅಧ್ಯಕ್ಷರ ಗಮನಕ್ಕೆ ತರಬೇಕು.
>
> **– ಬಿ.ಬಿ. ಅಸೂಟಿ.**
> **ಅಧ್ಯಕ್ಷರು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ.**

# ಜನರ ನೋವಿಗೆ ಸ್ಪಂದಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಸರ್ಕಾರದ ಎಲ್ಲ ಇಲಾಖೆಗಳ ನೌಕರರ ಹಲವಾರು ಸಮಸ್ಯೆಗಳಿದ್ದು, ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಎನ್‌ಪಿಎಸ್ ರದ್ದತಿ ಹಾಗೂ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ ಶೀಘ್ರ ಜಾರಿಗಾಗಿ ಕೈಗೊಂಡಿರುವ ಸರಕಾರ ಕ್ರಮಗಳ ಕುರಿತು ವಿಶೇಷ ಆದ್ಯತೆ ನೀಡಿ ಕೆಲಸ ಮಾಡುವುದಾಗಿ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಹೇಳಿದರು.

ಅವರು ಇತ್ತೀಚೆಗೆ ಪಟ್ಟಣಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಐತಿಹಾಸಿಕ ಶ್ರೀ ಸೋಮೇಶ್ವರನ ದರ್ಶನ ಪಡೆದು, ಗೌರವ ಸ್ವೀಕರಿಸಿ ನಂತರ ನಡೆದ ಸಭೆಯಲ್ಲಿ ನೌಕರರ ವತಿಯಿಂದ ನಡೆದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು.



ಹೊಸ ಪಿಂಚಣಿ ಯೋಜನೆ ಬದಲಿಗೆ ಹಳೆಯ ಪಿಂಚಣಿ ಯೋಜನೆ ಜಾರಿ ಹಾಗೂ ಕೇಂದ್ರ ವೇತನವನ್ನು ರಾಜ್ಯ ಸರ್ಕಾರಿ ಜಾರಿಗೊಳಿಸುವಂತೆ ಸರಕಾರಕ್ಕೆ ಆಗ್ರಹಿಸುತ್ತೇನೆ. ಎಲ್ಲ ಇಲಾಖೆಗಳ ನೌಕರರು ತಮ್ಮ ತಮ್ಮ ಹುದ್ದೆಯಲ್ಲಿ ಪ್ರಾಮಾಣಿಕತೆಯಿಂದ ಕಾರ್ಯನಿರ್ವಸುವದರ ಜೊತೆಗೆ ಜನರ ನೋವಿಗೆ ಸ್ಪಂದಿಸುವ ಕಾರ್ಯ ಮಾಡಿ ಎಂದು ಸಲಹೆ ನೀಡಿದರು.

ನೌಕರರ ಸಂಘದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ, ಉಪಾಧ್ಯಕ್ಷ ಸದಾನಂದ ನೆಲ್ಲುದ್ರಿ, ಜಿಲ್ಲಾಧ್ಯಕ್ಷರುಗಳಾದ ವೀರೇಶ ವಡೆಯನಪುರ, ಶಿವಾನಂದ, ಅರುಣ್, ಹುಡೇದಗೌಡ್ರು, ಲಕ್ಷ್ಮೇಶ್ವರ ತಾಲೂಕು ಘಟಕದ ಅಧ್ಯಕ್ಷ ಗುರುರಾಜ್ ಹವಳದ, ನಾಗರಾಜ್ ಹಳ್ಳಿಕೇರಿ, ಪೂರ್ಣಾಜಿ ಖರಾಟೆ, ಎಂ.ಎ. ನದಾಫ್ ಬಿ.ಎಸ್. ಹರ್ಲಾಪುರ, ಚಂದ್ರು ನೇಕಾರ, ಡಿ.ಎಚ್. ಪಾಟೀಲ್, ಜಿ.ಎಸ್. ಗುಡಗೇರಿ, ಎಂ.ಎಸ್. ಹಿರೇಮಠ, ಎಸ್.ಬಿ. ಅಣ್ಣಿಗೇರಿ, ನೌಕರರ ಸಂಘದ ಹಾಗೂ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಜರಿದ್ದರು.



ಗದಗ ನಗರದ ವಾರ್ಡ್ ನಂ. 13ರಲ್ಲಿ ದಿವಂಗತ ಪುನೀತ್ ರಾಜಕುಮಾರ್ ಅವರ ಜನ್ಮದಿನ ಆಚರಿಸಲಾಯಿತು. ರಾಜೀವಗಾಂಧಿ ನಗರ ಬಡಾವಣೆ ಪಿಎಸ್‌ಐ ಮಾರುತಿ ಜೋಗದಂಡಕರ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಕಾರ್ಯಕ್ರಮಕ್ಕೆ ಶುಭ ಹಾರೈಸಿದರು. ಸಿದ್ದಪ್ಪ ಅಂಗಡಿ, ನ್ಯಾಷನಲ್ ಡೆಕೋರೇಟರ್ ಮಾಲೀಕ ನೂರ ಹಣಗಿ, ಶೇಖರಗೌಡರ, ಕಿರಣ ಹಂಸನೂರ, ಗೋಪಾಲ ಮಗದುಮು, ವಾಯ್.ಡಿ. ಕೊಟ್ನಿಕಲ್, ಈಶಣ್ಣ ಬೇಲೇರಿ, ಡಾ. ಅನಂತ ಶಿವಪುರ, ಮಂಜುನಾಥ್ ಕೊಟ್ನಿಕಲ್ ಹಾಗೂ ವಾರ್ಡಿನ ಗುರು–ಹಿರಿಯರು ಉಪಸ್ಥಿತರಿದ್ದರು.

# ಲಕ್ಕುಂಡಿ ಮಹಿಳಾ ಸಂಜೀವಿನಿ ಒಕ್ಕೂಟಕ್ಕೆ ಬಹುಮಾನ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಗ್ರಾಮ ಪಂಚಾಯಿತಿ ಮಟ್ಟದ ಸಂಜೀವಿನಿ ಯೋಜನೆಯ ಮಹಿಳಾ ಒಕ್ಕೂಟದ ಅತ್ಯುತ್ತಮ ಕಾರ್ಯನಿರ್ವಹಣೆಗಾಗಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಪುರಸ್ಕಾರದೊಂದಿಗೆ 1 ಲಕ್ಷ ರೂ ಬಹುಮಾನ ಪಡೆದುಕೊಂಡಿದೆ.

ಇತ್ತೀಚೆಗೆ ಗದಗ ಜಿಲ್ಲಾಡಳಿತ ಭವನದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ಹಾಗೂ ಗದಗ ಜಿಲ್ಲಾ ಪಂಚಾಯತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು 1 ಲಕ್ಷ ರೂಗಳ ಚೆಕ್, ಬಹುಮಾನದೊಂದಿಗೆ ಪ್ರಶಸ್ತಿ ಫಲಕ ನೀಡಿ ಗೌರವಿಸಿದರು.

# ಪ್ರಯಾಣಿಕರ ಚಿನ್ನದ ಒಡವೆ ಕದಿಯುತ್ತಿದ್ದ ಕಳ್ಳಿಯರ ಗ್ಯಾಂಗ್ ಅರೆಸ್ಟ್..!

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಬೆಳಗಾವಿ ಮಾರ್ಕೆಟ್ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ಪ್ರಯಾಣಿಕರ ಚಿನ್ನದ ಒಡವೆ ಕದಿಯುತ್ತಿದ್ದ ಕಳ್ಳಿಯರ ಗ್ಯಾಂಗ್ ಅನ್ನು ಅರೆಸ್ಟ್ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ಬೆಳಗಾವಿ ನಗರದ ವಡ್ಡರವಾಡಿಯ ನಿವಾಸಿಗಳಾದ ಅನಿತಾ ಚೌಗಲೆ (58), ನಿಶಾ ಲೊಂಡೆ (25), ಗಿಡ್ಡಿ ಲೊಂಡೆ (35) ಬಂಧಿತ ಆರೋಪಿಗಳಾಗಿದ್ದು,

ಮಾರ್ಕೆಟ್ ಎಸಿಪಿ ಸಂತೋಷ ಸತ್ಯ ನಾಯಕ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿ ಮೂವರು ಖತರ್ನಾಕ್ ಕಳ್ಳಿಯರನ್ನು ಅರೆಸ್ಟ್ ಮಾಡಿದ್ದಾರೆ. ಹುಬ್ಬಳ್ಳಿ ಮೂಲದ ಕಾಂಚನ್ ಗೌಡರ ಎಂಬುವರ ಚಿನ್ನ ಕಳ್ಳತನ ಆಗಿತ್ತು.




ಈ ಬಗ್ಗೆ ಮಾರ್ಕೆಟ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಕೇಸ್ ದಾಖಲಿಸಿಕೊಂಡ ಮಾರ್ಕೆಟ್ ಪೊಲೀಸರು ಕಳ್ಳಿಯರನ್ನ ಬಂಧಿಸಿ ಜೈಲಿಗಟ್ಟಿದ್ದಾರೆ. ಆರೋಪಿಗಳಿಂದ 12 ಲಕ್ಷ 70 ಸಾವಿರ ಮೌಲ್ಯದ 143 ಗ್ರಾಂ ಚಿನ್ನದ ಒಡವೆ ಜಪ್ತಿ ಮಾಡಲಾಗಿದೆ.

## ವಿರಾಠ ವಿಶ್ವ ಗ್ಲೋಬಲ್ ಫೌಂಡೇಶನ್ ಶೈಕ್ಷಣಿಕ ನೆರವು ವಿತರಣೆ

# ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರಿದುಹೋದ ಸಮಯ ಮರಳಿ ಬಾರದು. ಹೀಗಾಗಿ ಸಮಯ ಹಾಳು ಮಾಡದೇ ಸಾಧನೆ ಮಾಡಬೇಕು. ಅದರಲ್ಲೂ ವಿದ್ಯಾರ್ಥಿ ಜೀವನದ ಸಮಯ ನಮ್ಮ ಬದುಕಿನ ಅತ್ಯಂತ ಅಮೂಲ್ಯ ಸಮಯವಾಗಿದ್ದು, ಅದನ್ನು ಸಮರ್ಥವಾಗಿ ಬಳಸಿಕೊಂಡಲ್ಲಿ ಪೂರ್ತಿ ಜೀವನವನ್ನು ನೆಮ್ಮದಿಯಿಂದ ಕಳೆಯಬಹುದು ಎಂದು ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ ಹೇಳಿದರು.

ಅವರು ನಗರದ ವಿಜಯನಗರ ಬಡಾವಣೆಯಲ್ಲಿರುವ ವಿಶ್ವಕರ್ಮ ಸಮುದಾಯ ಭವನದಲ್ಲಿ, ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ ಮಕ್ಕಳ ವ್ಯಕ್ತಿತ್ವ ವಿಕಸನ ಬೇಸಿಗೆ ಶಿಬಿರ ಆಯೋಜನೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿರಾಠ ವಿಶ್ವ ಗ್ಲೋಬಲ್ ಫೌಂಡೇಶನ್ ಬೆಂಗಳೂರು ಅವರು ನೀಡಿದ ಪ್ರತಿಭಾ ಪುರಸ್ಕಾರದ ಚೆಕ್ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಿ ಮಾತನಾಡಿದರು.



ಮುಖ್ಯ ಅತಿಥಿಯಾಗಿ ಬ್ಯಾಂಕ್ ಮ್ಯಾನೇಜರ್ ಮನು ಪತ್ತಾರ, ನಿವೃತ್ತ ಅಧಿಕಾರಿ ಗುಂಡಪ್ಪನವರು, ವಿಶ್ವಕರ್ಮ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಕೆ.ಎಸ್. ಬಡಿಗೇರ, ವಿಶ್ವಕರ್ಮ ನೌಕರರ ಸಂಘದ ನಿರ್ದೇಶಕರಾದ ಬಿ.ಎಮ್. ಬಡಿಗೇರ, ವಿಶ್ವಕರ್ಮ ಸಾಹಿತ್ಯ ಸಾಂಸ್ಕೃತಿಕ ಕಲಾ ಸಂಘದ ಅಧ್ಯಕ್ಷರಾದ ಮೌನೇಶ ಸಿ.ಬಡಿಗೇರ(ನರೇಗಲ್ಲ), ವಿಶ್ವಕರ್ಮ ಮಹಿಳಾ ಪತ್ತಿನ ಸಂಘದ ಅಧ್ಯಕ್ಷರಾದ ರಿಂದಮ್ಮ ವಡ್ಡಟ್ಟಿ, ನಿರ್ದೇಶಕರಾದ ಬಿ.ಎಂ. ಯರಕದ, ವಿಶ್ವಕರ್ಮ ಯುವ ಪರಿಷತ್ ಅಧ್ಯಕ್ಷರಾದ ಮಹೇಶ ಕಮ್ಮಾರ ಉಪಸ್ಥಿತರಿದ್ದರು.

ಕೆ.ಎಸ್. ಬಡಿಗೇರ ಸ್ವಾಗತಿಸಿದರು. ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು. ಎಸ್.ಎನ್. ಬಡಿಗೇರ ವಂದಿಸಿದರು. ಕಾರ್ಯಕ್ರಮದಲ್ಲಿ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು, ಅಂಗ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಮತ್ತು ಸಮಾಜ ಬಾಂಧವರು ಪಾಲ್ಗೊಂಡಿದ್ದರು.

> ಸಮಾಜದ ಮಕ್ಕಳ ಶಿಕ್ಷಣಕ್ಕೆ ವಿರಾಠ ವಿಶ್ವ ಗ್ಲೋಬಲ್ ಫೌಂಡೇಶನ್ ಶ್ಲಾಘನೀಯ ಕಾರ್ಯ ಮಾಡುತ್ತಿದೆ. ಪ್ರಸಕ್ತ ವರ್ಷ ಜಿಲ್ಲೆಯ 10 ವಿದ್ಯಾರ್ಥಿಗಳಿಗೆ ಸಹಾಧನ ನೀಡಿದೆ. ಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಮಕ್ಕಳಿಗೆ ಈ ಸೌಲಭ್ಯ ಸಿಗಲಿದೆ. ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ ಇವರನ್ನು ವಿರಾಠ ವಿಶ್ವ ಗ್ಲೋಬಲ್ ಫೌಂಡೇಶನ್‌ನ ಈ ಭಾಗದ ಸಂಚಾಲಕರನ್ನಾಗಿ ನೇಮಿಸಲಾಗಿದೆ. ಸಾಧಕ ವಿದ್ಯಾರ್ಥಿಗಳು ಅವರನ್ನು ಸಂಪರ್ಕಿಸಬಹುದು ಎಂದು ರಾಜಗೋಪಾಲ ಕಡ್ಲಿಕೊಪ್ಪ ತಿಳಿಸಿದರು.

# ಶನಿವಾರ ಕರ್ನಾಟಕ ಬಂದ್: ವಿವಿಧ ಸಂಘಟನೆಗಳ ಬೆಂಬಲ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಇದೇ ಮಾರ್ಚ್ 22 ರ ಶನಿವಾರ ಮರಾಠಿ ಪುಂಡರ ವಿರುದ್ಧ ವಿವಿಧ ಕನ್ನಡ ಪರ ಸಂಘಟನೆಗಳು ಕರ್ನಾಟಕ ಬಂದ್‌ಗೆ ಕರೆ ನೀಡಿವೆ. ಶನಿವಾರ



ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆವರೆಗೆ ಬೃಹತ್ ಹೋರಾಟ ನಡೆಸುವುದಕ್ಕೆ ವಾಟಾಳ್ ನಾಗರಾಜ್ ಕರೆ ನೀಡಿದ್ದು ಈ ಹೋರಾಟಕ್ಕೆ ಹಲವು ಸಂಘಟನೆಗಳು ಬೆಂಬಲ ಸೂಚಿಸಿವೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಾಟಾಳ್ ನಾಗರಾಜ್, ಮಾರ್ಚ್ 22ರಂದು ಬೆಳಗ್ಗೆ 6ರಿಂದ ಸಂಜೆ 6 ಗಂಟೆ ತನಕ ಬಂದ್ ಆಗುವುದು ನಿಶ್ಚಿತ. ಬೆಳಗ್ಗೆ 10:30ಕ್ಕೆ ಟೌನ್ ಹಾಲ್‌ನಿಂದ ಫ್ರೀಡಂ ಪಾರ್ಕ್ ತನಕ ಪ್ರತಿಭಟನಾ ಮೆರವಣಿಗೆ ಮಾಡುತ್ತೇವೆ. ಹೀಗಾಗಿ ನಿಮ್ಮ ಸ್ವಾಭಿಮಾನಕ್ಕಾಗಿ ಯಾರು ವಾಹನ ಹತ್ತಬೇಡಿ ಎಂದು ಸಾರ್ವಜನಿಕರಿಗೆ ವಾಟಾಳ್ ನಾಗರಾಜ್ ಮನವಿ ಮಾಡಿದ್ದಾರೆ.

# ಭಯವಿಲ್ಲದೆ ಪರೀಕ್ಷೆ ಬರೆಯಿರಿ



■ವಿಜಯಸಾಕ್ಷಿ ಸುದ್ದಿ, ಗದಗ

ಪರೀಕ್ಷೆ ಎಂಬುವುದು ಭಯವಲ್ಲ, ಅದೊಂದು ಮೌಲ್ಯಮಾಪನ. ನಿಮ್ಮ ಆತ್ಮಶಕ್ತಿ ಮತ್ತು ಧೈರ್ಯವನ್ನು ಹೆಚ್ಚಿಸುವ ಸಾಧನವಾಗಿದೆ. ನಿಮ್ಮ ಮನೋಬಲದ ಶಕ್ತಿಯೂ ಆಗಿದೆ. ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರನ್ನಾಗಿಸುತ್ತದೆ. ತೇರ್ಗಡೆ ಹೊಂದಿ ಮುಂದಿನ ತರಗತಿಯನ್ನು ಪ್ರವೇಶಿಸಲೂ ಅಗತ್ಯವಾಗಿದೆ ಮತ್ತು ಹೆಚ್ಚಿನ ಓದಿಗಾಗಿ ನಿಮಗೆ ಅನುಕೂಲವಾಗಲಿದೆ. ಮನುಷ್ಯನ ಪ್ರತಿ ಹಂತದಲ್ಲಿ ಸೋಲು-ಗೆಲುವು, ಪಾಸು-ಫೇಲು ಇರುವುದು ಸಹಜ. ನಿಮ್ಮ ಶ್ರಮಕ್ಕೆ ಬರುವ ಫಲವು ಯಾವುದೇ ಆಗಿರಲಿ ಸ್ವೀಕರಿಸುವ ಮನೋಭಾವ ನಿಮ್ಮಲ್ಲಿ ಇರಬೇಕು. ಯಾವುದೇ ಆತಂಕವಿಲ್ಲದೆ ಪರೀಕ್ಷೆ ಬರೆಯಿರಿ ಎಂದು ಕಪ್ಪತ್ತಗಿರಿ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಎಂ.ಇಟಗಿಮಠ ವಿದ್ಯಾರ್ಥಿಗಳಿಗೆ ಶುಭ ಕೋರಿದ್ದಾರೆ.

ಶಿಕ್ಷಕರು ನಿಮ್ಮ ಮೇಲಿಟ್ಟ ಭರವಸೆಯನ್ನು ಹುಸಿಯಾಗಿಸಬೇಡಿ, ಹೆತ್ತವರು ನಿಮ್ಮ ಮೇಲಿಟ್ಟ ನೀರೀಕ್ಷೆಯನ್ನು ನಿರಾಸೆಗೊಳಿಸಬೇಡಿ. ನಿರಂತರ ಓದು-ಬರಹ ನಿಮ್ಮ ಭಯವನ್ನು ಕೊಲ್ಲುವ ಆಯುಧವಾಗಿದೆ. ಫಲಿತಾಂಶ ಏನೇ ಬಂದರೂ ಸಮನಾಗಿ ಸ್ವೀಕರಿಸುವ ಮನೋಭಾವ ಇರಲಿ, ಪರೀಕ್ಷೆ ಎದುರಿಸುವ ಸಾಮರ್ಥ್ಯ ನಿಮ್ಮಲ್ಲಿದೆ ನಿಮಗೆಲ್ಲರಿಗೂ ಒಳಿತಾಗಲಿ ಎಂದು ಅವರು ಹಾರೈಸಿದ್ದಾರೆ.

# ಕಾವೇಂಶ್ರೀಗೆ ಶ್ರದ್ಧಾಂಜಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಿಧನರಾದ ಕಾವೇಂಶ್ರೀ ಎಂದೆ ಖ್ಯಾತರಾದ ಉದ್ಯಮಿ ಹಾಗೂ ಸಾಹಿತಿ ಕಾವೇಂಶ್ರೀನಿವಾಸ ಅವರ ನಿಧನಕ್ಕೆ ನಗರದ ವಿಶ್ವ ಹೋಟೆಲ್‌ನಲ್ಲಿ ಗದಗ ಜಿಲ್ಲಾ ಹೋಟೆಲ್ ಒಡೆಯರ ಸಂಘದಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅಗಲಿದ ಕಾವೇಂಶ್ರೀ ಅವರ ಆತ್ಮಕ್ಕೆ ಶಾಂತಿಕೋರಿ ಗೌರವ ಸಲ್ಲಿಸಲಾಯಿತು. ನಂತರ ಅವರ ಕುರಿತು ಗುಣಗಾನ ಮಾಡಲಾಯಿತು. ಈ ಸಂದರ್ಭದಲ್ಲಿ ಹೋಟೆಲ್ ಒಡೆಯರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

**'ನಮ್ಮೂರು ನಮ್ಮ ಕೆರೆ' ಯೋಜನೆಯಡಿ ಬಸಾಪುರ ಗ್ರಾಮದ ಕೆರೆಯ ಹೂಳೆತ್ತುವ ಕಾರ್ಯ**

# ಬಸಾಪುರ ಕೆರೆಗೆ ತುಂಬಲಿದೆ ಜೀವಜಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಮಾಜಿಕ ಸ್ವಧಾರಣೆಯ ಕಳಕಳಿ ಹೊಂದಿರುವ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವಿರೇಂದ್ರ ಹೆಗ್ಗಡೆಯವರ ಕನಸಿನ ಯೋಜನೆಯಾದ 'ನಮ್ಮೂರು ನಮ್ಮ ಕೆರೆ' ಯೋಜನೆಯಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಲಕ್ಷ್ಮೇಶ್ವರ ತಾಲೂಕಿನ ಬಸಾಪುರ ಗ್ರಾಮದ ಕೆರೆಯನ್ನು ಆಯ್ಕೆ ಮಾಡಿ ಕೆರೆ ಹೂಳೆತ್ತುವ ಕಾರ್ಯ ಅತ್ಯಂತ ಭರದಿಂದ ಸಾಗಿದೆ.

8 ವರ್ಷಗಳ ಹಿಂದೆ ಪೂಜ್ಯರು ಬರಗಾಲದ ಸಂದರ್ಭದಲ್ಲಿ ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಟ್ಯಾಂಕರ್ ಮೂಲಕ ಕುಡಿಯುವ ನೀರಿನ ವ್ಯವಸ್ಥೆ ಮಾಡಿಸಿದ್ದರು. ಈ ಸಂದರ್ಭದಲ್ಲಿ ಶಾಶ್ವತ ನೀರಿನ ವ್ಯವಸ್ಥೆಯನ್ನೇ ಮಾಡುವ ಉದ್ದೇಶದಿಂದ ರಾಜ್ಯಾದ್ಯಂತ ನಿರ್ಲಕ್ಷಕ್ಕೊಳಗಾಗಿರುವ ಕೆರೆಗಳ ಅಭಿವೃದ್ಧಿಗೊಳಿಸುವ ಕಾರ್ಯ ಆರಂಭಿಸಿ, ಇಲ್ಲಿವರೆಗೂ ರಾಜ್ಯದಲ್ಲಿ 850ಕ್ಕೂ ಹೆಚ್ಚು ಕೆರೆಗಳನ್ನು ಅಭಿವೃದ್ಧಿಗೊಳಿಸಿದ್ದಾರೆ.

> ಕೆರೆಯಲ್ಲಿ ಹೂಳು ತುಂಬಿದ್ದರಿಂದ ಕಳೆದ 2 ವರ್ಷಗಳಿಂದ ನೀರಿಲ್ಲದೇ ಸಾಕಷ್ಟು ನೀರಿನ ಸಮಸ್ಯೆ ಅನುಭವಿಸಿದ್ದೇವೆ. ಕೆರೆ ಅಭಿವೃದ್ಧಿಗೆ ಸರ್ಕಾರಕ್ಕೆ, ಜನಪ್ರತಿನಿಧಿಗಳಿಗೆ ಸಾಕಷ್ಟು ಬಾರಿ ಮನವಿ ಮಾಡಿದ್ದರೂ ಪ್ರಯೋಜನವಾಗಿರಲಿಲ್ಲ. ಈಗ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಕೆರೆ ಹೂಳೆತ್ತುತ್ತಿರುವುದು ಗ್ರಾಮಸ್ಥರಲ್ಲಿ ಸಂತಸ-ಸಂಭ್ರಮವನ್ನುಂಟುಮಾಡಿದೆ. ನಮ್ಮೂರ ಕೆರೆಯಲ್ಲಿ ನೀರಿದ್ದರೆ ಇಡೀ ಗ್ರಾಮದ ಜನರು, ಜಾನುವಾರುಗಳಿಗೆ ಅನಕೂಲವಾಗುತ್ತದೆ. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಗೆ ಋಣಿಯಾಗಿದ್ದೇವೆ ಮತ್ತು ಕೆರೆಯನ್ನು ಅತ್ಯಂತ ಕಾಳಜಿಯಿಂದ ಸಂರಕ್ಷಣೆ ಮಾಡಿಕೊಳ್ಳುತ್ತೇವೆ.
>
> **– ಅಶೋಕ ತುಂಬಣ್ಣವರ.**
> **ಕೆರೆ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ.**



ಇದೀಗ ಬಸಾಪುರ ಗ್ರಾಮದ 6 ಎಕರೆ 30 ಗುಂಟೆ ವಿಸ್ತೀರ್ಣದ ಕೆರೆಯ ಹೂಳೆತ್ತುವ ಕಾರ್ಯ 6 ಲಕ್ಷ 60 ಸಾವಿರ ರೂ ಮೊತ್ತದ ಕಾರ್ಯ ಕಳೆದ 15 ದಿನಗಳಿಂದ ಭರದಿಂದ ಸಾಗಿದೆ. ಕೆರೆಯಲ್ಲಿ ಹಿಟಾಚಿ, ಟ್ರ್ಯಾಕ್ಟರ್ ಮತ್ತು ಟಿಪ್ಪರ್‌ಗಳ ಭರಾ-ಟೆಯ ಸದ್ದು ಕೇಳುತ್ತಿದೆ. ಸರದಿಯಂತೆ ರೈತರು ತಮ್ಮ ಹೊಲಗದ್ದೆಗಳಿಗೆ ಕೆರೆಯ ಮಣ್ಣನ್ನು ಸಾಗಿಸಿ ಹೊಲಗಳ ಫಲವತ್ತತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿದ್ದಾರೆ. ನಿತ್ಯ 2 ಹಿಟ್ಯಾಚಿ ಮೂಲಕ ನೂರಾರು ಟ್ರ್ಯಾಕ್ಟರ್ ಮತ್ತು ಟಿಪ್ಪರ್‌ಗಳಲ್ಲಿ ಲಕ್ಷ್ಮೇಶ್ವರ, ರಾಮಗೇರಿ, ಹರ್ಲಾಪುರ, ಪಶುಪತಿಹಾಳ, ಯರೇಬೂದಿಹಾಳ, ಶಿಗ್ಲಿ, ಅಡರಕಟ್ಟಿ ಭಾಗದಿಂದ ರೈತರು ಮಣ್ಣನ್ನು ತೆಗೆದುಕೊಂಡು ಹೋಗುತ್ತಿದ್ದಾರೆ. ಇದುವರೆಗೂ 5 ಸಾವಿರ ಟ್ರ್ಯಾಕ್ಟರ್ ಫಲವತ್ತಾದ ಮಣ್ಣನ್ನು ರೈತರು ತೆಗೆದುಕೊಂಡು ಹೋಗಿದ್ದು, ಇನ್ನೂ 8/10 ದಿನ ಈ ಕಾರ್ಯ ನಡೆಯಲಿದೆ.

25 ವರ್ಷಗಳಿಂದ ಹೂಳೆತ್ತದ ಕೆರೆಯ ಹೂಳನ್ನು ಈ ವರ್ಷ ತೆಗೆಯುತ್ತಿರುವುದು ಗ್ರಾಮಸ್ಥರಲ್ಲಿ ಸಂತಸ ತಂದಿದೆ. ಹಿರಿಯರ ಕಾಲದಿಂದಲೂ ಈ ಕೆರೆಯ ನೀರನ್ನೇ ಕುಡಿಯಲು ಬಳಸುತ್ತಿದ್ದು, ಕೆರೆಯ ನೀರೇ ಜೀವನಾಧಾರವಾಗಿದೆ. ನಮ್ಮೂರ ಕೆರೆ ನಮ್ಮ ಹೆಮ್ಮೆಯಾಗಿದೆ ಎನ್ನುತ್ತಾರೆ ಗ್ರಾಮಸ್ಥರು.

> ಹೂಳೆತ್ತುವ ಕಾರ್ಯಕ್ಕೆ ರೈತರಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗಿದೆ. ಸುತ್ತಮುತ್ತಲಿನ ಗ್ರಾಮಗಳ ರೈತರು ಅತ್ಯಂತ ಫಲವತ್ತಾದ ಈ ಮಣ್ಣನ್ನು ಹೊಲಗಳಿಗೆ ಹಾಕಿಸಿ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಿಕೊಳ್ಳಬೇಕು. ಇದಕ್ಕಾಗಿ ಕೆರೆಯಲ್ಲಿ ಬೆಳಗಿನಿಂದ ಸಂಜೆವರೆಗೆ ಮಣ್ಣು ಎತ್ತಿ ಹಾಕಲು ಹಿಟಾಚಿ ವ್ಯವಸ್ಥೆ ಮಾಡಲಾಗಿದೆ. ಕೆರೆ ಪೂರ್ಣ ಪ್ರಮಾಣದಲ್ಲಿ ಭರ್ತಿಯಾದರೆ ಸುತ್ತಲಿನ ರೈತರ ಬೋರ್‌ವೆಲ್‌ಗಳ ಅಂತರ್ಜಲ ಮಟ್ಟ ವೃದ್ಧಿಸುತ್ತದೆ. ಜನ ಜಾನುವಾರು, ಪ್ರಾಣಿ-ಪಕ್ಷಿಗಳಿಗೆ ಇದರಿಂದ ಜೀವಜಲ ಲಭಿಸುತ್ತದೆ.
>
> **– ಪುನೀತ ಓಲೇಕಾರ.**
> **ಶ್ರೀ ಧ.ಗ್ರಾ ಕ್ಷೇತ್ರ ಯೋಜನಾಧಿಕಾರಿ.**



**ಗಗನಯಾತ್ರಿ ಸುನಿತಾ ವಿಲಿಯಮ್ಸ್ ಮರಳಿ ಭೂತಾಯಿ ಮಡಿಲಿಗೆ**

# ಚಂದನ ವಿದ್ಯಾರ್ಥಿಗಳಿಂದ ಸಂಭ್ರಮಾಚರಣೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗಗನಯಾತ್ರಿಗಳು ಸುರಕ್ಷಿತವಾಗಿ ಭೂತಾಯಿಯ ಮಡಿಲಿಗೆ ಆಗಮಿಸಿದ್ದಕ್ಕೆ ಪಟ್ಟಣದ ಸ್ಕೂಲ್ ಚಂದನದ ವಿದ್ಯಾರ್ಥಿಗಳು ಬುಧವಾರ ಶಾಲಾ ಅಂಗಳದಲ್ಲಿ ಸಂಭ್ರಮಾಚರಣೆ ಮಾಡಿದರು. ನೂರಾರು ವಿದ್ಯಾರ್ಥಿಗಳು ಸುನಿತಾ ಹಾಗೂ ಅವರ ಸಹ ಗಗನಯಾತ್ರಿಗಳಿಗೆ ಶುಭಕೋರುವ ನಿಟ್ಟಿನಲ್ಲಿ ಪರಸ್ಪರ ಅಭಿನಂದಿಸಿ ಸುನಿತಾ ಅವರ ಹೆಸರಿನಲ್ಲಿ ಜಯಘೋಷಗಳನ್ನು ಕೂಗಿದರು.

9 ತಿಂಗಳ ಅಂತರಿಕ್ಷ ವಾಸದ ನಂತರ ಬಾಹ್ಯಾಕಾಶ ಗರ್ಭದಿಂದ ಭೂತಾಯಿಯ ಮಡಿಲಿಗೆ ಸೇರಿದ ಗಗನಯಾತ್ರಿಗಳಿಗೆ ಅಭಿನಂದನೆಯನ್ನು ಸಲ್ಲಿಸಿ, ಸುನಿತಾ ಅವರು ಭೂಮಿಗೆ ಬರುತ್ತಿದ್ದಂತೆ ಅವರು ಭೂಮಿಗೆ ಮರಳಿ ಬರುವಲ್ಲಿ ಕೈಗೊಂಡ ಆಪರೇಷನ್ ಯಶಸ್ವಿಯಾಗಿರುವದಕ್ಕೆ ಸ್ಕೂಲ್‌ಚಂದನದ ವಿದ್ಯಾರ್ಥಿಗಳು ತಮ್ಮ ಅಖಖಔ (ಚಂದನ ಸ್ಪೇಸ್ ರಿಸರ್ಚ ಆರ್ಗನೈಸೇಶನ್) ಕೇಂದ್ರದಿಂದ ಅಭಿನಂದನೆಯನ್ನು ಸಲ್ಲಿಸಿದರು. ಸುನಿತಾ ವಿಲಿಯಮ್ಸ್ ಹಾಗೂ ಗಗನಯಾತ್ರಿಗಳ ಆರೋಗ್ಯ ಬೇಗನೆ ಭೂಮಿಗೆ ಹೊಂದಿಕೊಳ್ಳುವಂತಾಗಲಿ ಎಂದು ದೇವರನ್ನು ಪೂಜಿಸಿ ಪ್ರಾರ್ಥನೆ ಸಲ್ಲಿಸಿದರು.

ವಿದ್ಯಾರ್ಥಿಗಳು ನಾಸಾ, ಇಸ್ರೋ, ಸ್ಪೇಸ್ ಎಕ್ಸ್ ಸಂಸ್ಥೆಗೆ ಹಾಗೂ ಶ್ರಮಿಸಿದ ವಿಜ್ಞಾನಿಗಳಿಗೆ ವಿಶೇಷವಾದ ಧನ್ಯವಾದಗಳನ್ನು ಅರ್ಪಿಸಿದರು. ಗಗನಯಾತ್ರಿಗಳ ಬಗ್ಗೆ ಧನತ್ಮಾಕವಾದ ವಿಚಾರಗಳನ್ನು ಉತ್ತಮವಾಗಿ ಪ್ರಚಾರ ಮಾಡಿದ ಮಾಧ್ಯಮಗಳಿಗೂ ಸಹ ಮಕ್ಕಳು ಧನ್ಯವಾದ ಸಲ್ಲಿಸಿದರು.

# 'ಅತ್ಯುತ್ತಮ ಕಲಾಕೃತಿ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಆಂಧ್ರಪ್ರದೇಶದ ಸ್ಟೇಟ್ ಅಂಡ್ ಕಲ್ಚರ್ ಕಮಿಷನ್ ಕ್ರಿಯೇಟಿವಿಟಿ ಫೈನ್ ಆರ್ಟ್ ಅಕಾಡೆಮಿ ಆಂಧ್ರಪ್ರದೇಶ ಗುಂಟೂರ್ ಇವರ ಸಂಯುಕ್ತ ಆಶ್ರಯದಲ್ಲಿ 19ನೇ ವರ್ಷದ ಇಂಡಿಯನ್ ಆರ್ಟ್ ಫೆಸ್ಟಿವಲ್ ನ್ಯಾಷನಲ್ ಆರ್ಟ್ ಕಾಂಪಿಟೇಶನ್ ಅದ್ದೂರಿಯಾಗಿ ಜರುಗಿತು. ಈ ಚಿತ್ರಕಲಾ ಸ್ಪರ್ಧೆಯಲ್ಲಿ ತೋಟದ ಚಿಳ್ಳಾಳೇಶ್ವರ ಶಾಲೆಯ ವಿದ್ಯಾರ್ಥಿನಿ ಸದಾಫ ಖಾದರಸಾಬ ತಹಸೀಲ್ದಾರ ಭಾಗವಹಿಸಿ, ಪರಿಸರ ಚಿತ್ರವನ್ನು ರಚಿಸಿ ಅತ್ಯುತ್ತಮ ಕಲಾಕೃತಿ ಪ್ರಶಸ್ತಿಯನ್ನು ಪಡೆದಿದ್ದಾಳೆ.

ಸಾಧಕ ವಿದ್ಯಾರ್ಥಿನಿಗೆ ಚಿತ್ರಕಲೆ ಮತ್ತು ಕರಕುಶಲ ತರಬೇತಿ ನೀಡಿದ ಕಲಾವಿದರಾದ ಡಾ. ಜಾಕೀರಹುಸೇನ ಅವರಿಗೆ ನಗರದ ಎಂ.ಕೆ. ಕೊರ್ಲಹಳ್ಳಿ ಫೌಂಡೇಶನ್ ಟ್ರಸ್ಟ್‌ನ ಅಧ್ಯಕ್ಷರು ಸರ್ವ ಸದಸ್ಯರು, ಸಿಬ್ಬಂದಿ ವರ್ಗ, ಅಂಗನವಾಡಿ ಕಾರ್ಯಕರ್ತೆ ಕಸ್ತೂರಿ ಆಲೂರ, ಮುತ್ತು ತೋಟದ, ಚಿಳ್ಳಾಳೇಶ್ವರ ಶಾಲೆಯ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗ ಹಾಗೂ ಕಲಾಕಾರ ಬಳಗದ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

### ತಾಂತ್ರಿಕ ದೋಷ: ರಸ್ತೆ ಮಧ್ಯೆದಲ್ಲೇ ಸುಟ್ಟು ಭಸ್ಮವಾದ ಥಾರ್..!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಹಿಂದ್ರಾ ಥಾರ್ ವಾಹನ ತಾಂತ್ರಿಕ ದೋಷದಿಂದ ರಸ್ತೆ ಮಧ್ಯೆದಲ್ಲೇ ಸುಟ್ಟು ಭಸ್ಮವಾದ ಘಟನೆ ಧಾರವಾಡದ ಸವದತ್ತಿ ರಸ್ತೆಯಲ್ಲಿಯ ಕಾಶಿನಗರದ ಬಳಿ ನಡೆದಿದೆ. ಧಾರವಾಡದಿಂದ ಸವದತ್ತಿಗೆ ಹೊರಟಿದ್ದ ಮಹಿಂದ್ರಾ ಥಾರ್ ಕಾರ್ ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕಾರು ಸಂಪೂರ್ಣ ಸುಟ್ಟು ಕರಕಲಾಗಿದೆ. ಕೂಡಲೇ ಘಟನಾ ಸ್ಥಳಕ್ಕೆ ಅಗ್ನಿ ಶಾಮಕ ದಳದ ಸಿಬ್ಬಂದಿ ಭೇಟಿ ನೀಡಿ, ಬೆಂಕಿ ನಂದಿಸಿದ್ದಾರೆ. ಧಾರವಾಡ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಝುಯನ್‌ಗೆ ಅಸಾಧಾರಣ ಪ್ರತಿಭಾ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತ ಆಶಯದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಕ್ಕಳಿಗಾಗಿ ನೀಡುವ ಅಸಾಧಾರಣ ಪ್ರತಿಭಾ ಪುರಸ್ಕಾರ ಸಮಾರಂಭವು ಅದ್ದೂರಿಯಾಗಿ ಜರುಗಿತು.

ಲಲಿತಕಲಾ ಕ್ಷೇತ್ರದಲ್ಲಿ ರಾಯಲ್ ಇಂಗ್ಲೀಷ್ ಮೀಡಿಯಂ ಶಾಲೆಯ ವಿದ್ಯಾರ್ಥಿ ಝುಯನ ಖಾದರಸಾಬ ತಹಸೀಲ್ದಾರ ರಾಷ್ಟ್ರ ಮತ್ತು ಅಂತಾರಾಷ್ಟ್ರ ಮಟ್ಟದ ಚಿತ್ರಕಲಾ ಸ್ಪರ್ಧೆಗಳಲ್ಲಿ ಭಾಗವಹಿಸಿ, ಕಲೆ, ಸಂಸ್ಕೃತಿಕ ಕ್ಷೇತ್ರದಲ್ಲಿನ ಅಸಾಧಾರಣ ಪ್ರತಿಭೆಯನ್ನು ಗುರುತಿಸಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ 2024-25ನೇ ಸಾಲಿಗೆ ಗದಗ ಜಿಲ್ಲಾ ಮಟ್ಟದ ಅಸಾಧಾರಣ ಪ್ರತಿಭಾ ಪುರಸ್ಕಾರ ಪ್ರಶಸ್ತಿಯನ್ನು 10 ಸಾವಿರ ರೂ ನಗದು ಪುರಸ್ಕಾರದೊಂದಿಗೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆರಂದು ಗೌರವಿಸಲಾಯಿತು.



ಈ ವಿದ್ಯಾರ್ಥಿಗೆ ಚಿತ್ರಕಲೆ ಮತ್ತು ಕರಕುಶಲ ತರಬೇತಿ ನೀಡಿದ ಕಲಾವಿದರಾದ ಡಾ. ಜಾಕೀರ ಹುಸೇನ ಅವರಿಗೆ ನಗರದ ಎಂ.ಕೆ. ಕೊರ್ಲಹಳ್ಳಿ ಫೌಂಡೇಶನ್ ಟ್ರಸ್ಟ್‌ನ ಅಧ್ಯಕ್ಷರು, ಸರ್ವ ಸದಸ್ಯರು, ಸಿಬ್ಬಂದಿ ವರ್ಗ, ಅಂಗನವಾಡಿ ಕಾರ್ಯಕರ್ತೆ ಕಸ್ತೂರಿ ಆಲೂರ, ಮುತ್ತು ರಾಯಲ್ ಇಂಗ್ಲೀಷ್ ಮೀಡಿಯಂ ಶಾಲೆಯ ಶಿಕ್ಷಕಿ ಜೀನತ ಹಾಗೂ ಸಿಬ್ಬಂದಿ ವರ್ಗ, ಕಲಾಕಾರ ಬಳಗದ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ಬ್ಯಾಂಕಿಂಗ್ ಉದ್ದಿಮೆಯಲ್ಲಾಗಿದೆ ಸಾಕಷ್ಟು ಪ್ರಗತಿ: ಅಶ್ರಫ್ ಅಲ್ಲಳ್ಳಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಹಣದ ವ್ಯವಹಾರಕ್ಕೆ ಮೊದಲು ಗ್ರಾಹಕ ಬ್ಯಾಂಕ್‌ಗೆ ತೆರಳಬೇಕಿತ್ತು. ಈಗ ಬ್ಯಾಂಕಿಂಗ್ ಉದ್ದಿಮೆಯಲ್ಲಿ ಸಾಕಷ್ಟು ಪ್ರಗತಿ ಕಾಣಬಹುದಾಗಿದೆ ಎಂದು ಗಂಗಾವತಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ನಿರ್ವಹಣಾಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಅಶ್ರಫ್ ಅಲ್ಲಳ್ಳಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಬಿಬಿಎ ವಿಭಾಗದಲ್ಲಿ ಬುಧವಾರ ಆಂತರಿಕ ಗುಣಮಟ್ಟ ಭರವಸಾ ಕೋಶ ಹಾಗೂ ನುರ್ವಹಣಾಶಾಸ್ತ್ರ ವಿಭಾಗದ ಸಹಯೋಗದಲ್ಲಿ ನಡೆದ ವಿದ್ಯಾರ್ಥಿಗಳಿಗೆ ನಡೆದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

1990-2000 ಕ್ಕಿಂತ ಮುಂಚೆ ಎಟಿಎಂಗಳಿರಲಿಲ್ಲ. ಮೊಬೈಲ್‌ಗಳಿರಲಿಲ್ಲ. ಆಗ ಹಣದ ವ್ಯವಹಾರಕ್ಕಾಗಿ ಬ್ಯಾಂಕ್‌ಗಳಿಗೆ ತೆರಳಬೇಕಿತ್ತು. ಆಧುನಿಕ ತಂತ್ರಜ್ಞಾನದ ಬೆಳವಣಿಗೆಗಳನ್ನು ಸಮರ್ಪಕವಾಗಿ ಅಳವಡಿಸಿಕೊಂಡಿರುವ ಬ್ಯಾಂಕಿಂಗ್ ಕ್ಷೇತ್ರ ಇಂದು ಅಗಾಧ ಅಭಿವೃದ್ಧಿ ಸಾಧಿಸಿದೆ. ಬರುವ ದಿನಗಳಲ್ಲಿ ರೋಬೋಟ್‌ಗಳು ಈ ಉದ್ದಿಮೆಯಲ್ಲಿ ಕಾಣಸಿಗುವ ಕಾಲ ದೂರವಿಲ್ಲ ಎಂದರು.

ಆಂತರಿಕ ಗುಣಮಟ್ಟ ಭರವಸಾ ಕೋಶದ ಸಂಯೋಜಕರು ಮತ್ತು ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಮಾತನಾಡಿ, ವಿದ್ಯಾರ್ಥಿಗಳಿಗೆ ಇಂಥ ಕಾರ್ಯಕ್ರಮಗಳು ಉಪಯುಕ್ತವಾಗಿದ್ದು, ಪ್ರಯೋಜನ ಪಡೆಯುವಂತೆ ಕರೆ ನೀಡಿದರು. ಕಾಲೇಜಿನ ನಿರ್ವಹಣಾಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶಿವನಾಥ ಈ.ಜಿ. ಅತಿಥಿ ಪರಿಚಯದ ಜೊತೆಗೆ ಪ್ರಾಸ್ತಾವಿಕ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯ್ಕ ಅಧ್ಯಕ್ಷತೆ ವಹಿಸಿದ್ದರು.

ಈ ವೇಳೆ ನಿರ್ವಹಣಾಶಾಸ್ತ್ರ ವಿಭಾಗದ ಬೋಧಕ ಸಿಬ್ಬಂದಿ ಶಂಕರಾನಂದ, ಶಾಹಿನಾ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಸುಷ್ಮಿತಾ ಮತ್ತು ಪವಿತ್ರ ಪ್ರಾರ್ಥಿಸಿದರು. ಕವನಾ ನಿರೂಪಿಸಿದರು. ಸಹಾಯಕ ಪ್ರಾಧ್ಯಾಪಕ ಎಸ್.ಬಾಲಾಜಿ ಸ್ವಾಗತಿಸಿದರು. ಶಂಕರಾನಂದ ವೈ.ಎಂ. ವಂದಿಸಿದರು.

**ಲಕ್ಷ್ಮೇಶ್ವರ, ಶಿಗ್ಲಿಯಲ್ಲಿ ಸಡಗರ ಸಂಭ್ರಮದ ರಂಗಿನೋಕುಳಿ । ಕೃತಕ ಮಳೆಯಲ್ಲಿ ಮಿಂದೆದ್ದ ಜನತೆ**

# ಸೌಹಾರ್ದತೆ ಬೆಸೆದ ಹೋಳಿ ಹಬ್ಬ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಸ್ಪರ ಪ್ರೀತಿ-ಸ್ನೇಹ, ಬಾಂಧವ್ಯ-ಸೌಹಾರ್ದತೆ ಬೆಸೆಯುವ ರಂಗಿನೋಕುಳಿ ಹಬ್ಬ ಮಂಗಳವಾರ ಲಕ್ಷ್ಮೇಶ್ವರ ಮತ್ತು ಶಿಗ್ಲಿಯಲ್ಲಿ ಸಡಗರ ಸಂಭ್ರಮದಿಂದ ನಡೆಯಿತು. ಡಿಜೆ ಅಬ್ಬರದ ಸಂಗೀತಕ್ಕೆ ಯುವಕರು, ಮಕ್ಕಳು ರೇನ್ ಡ್ಯಾನ್ಸ್ ಮೂಲಕ ಬಣ್ಣದ ಹಬ್ಬದಲ್ಲಿ ಮಿಂದೆದ್ದರು. ಬೆಳ್ಳಂಬೆಳಿಗ್ಗೆಯೇ ಪುಟ್ಟ ಮಕ್ಕಳು ಹೆಣ್ಣು-ಗಂಡು ಬೇಧಬಾವವಿಲ್ಲದೇ ಬಣ್ಣದ ನೀರು ತುಂಬಿದ್ದ ಪಿಚಕಾರಿ ಮತ್ತು ಪ್ಲಾಸ್ಟಿಕ್ ಬಾಟಲಿಗಳನ್ನು ಹಿಡಿದು ಪರಸ್ಪರ ಬಣ್ಣ ಹಚ್ಚುವ ಮೂಲಕ ರಂಗಿನಾಟಕ್ಕೆ ರಂಗು ಮೂಡಿಸಿದರು.

ಪಟ್ಟಣದ ಹಳ್ಳದಕೇರಿ ಓಣಿಯ ಯುವಕ ಸಂಘದವರು ಟ್ರ್ಯಾಕ್ಟರ್‌ನಲ್ಲಿ ಪಕ್ಷಿಯ ಆಕೃತಿಯಲ್ಲಿ ರತಿ-ಕಾಮಣ್ಣನ ಮೂರ್ತಿಯನ್ನಿರಿಸಿ ಡಿಜೆ ಅಬ್ಬರದ ಕುಣಿತದೊಂದಿಗೆ ಮೆರವಣಿಗೆ ಮಾಡಿದರು. ಮೆರವಣಿಗೆಗೆ ಚಾಲನೆ ನೀಡಿ ಪಿಎಸ್‌ಐ ನಾಗರಾಜ ಗಡಾದ, ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಮಾತನಾಡಿ, ಹೋಳಿ ಹಬ್ಬ ಭಾರತದ ಸಂಸ್ಕೃತಿಯ ಪ್ರತೀಕ. ಏಳು ಬಣ್ಣ ಸೇರಿ ಬಿಳಿಯ ಬಣ್ಣವಾಗುವಂತೆ ವಿವಿಧ ಜಾತಿ, ಧರ್ಮ, ಬಡವ-ಬಲ್ಲಿದ, ಮೇಲು-ಕೀಳು, ಹಿರಿ-ಕಿರಿಯರನ್ನು ಸೇರಿಸಿ ಪರಸ್ಪರರಲ್ಲಿ ಸ್ನೇಹ, ಪ್ರೀತಿ, ವಿಶ್ವಾಸ, ಬಾಂಧವ್ಯ, ಸೌಹಾರ್ದತೆ ಬೆಸೆಯುವ ಶಕ್ತಿ ಹೋಳಿ ಹಬ್ಬಕ್ಕಿದೆ.



ಈ ಹಬ್ಬ ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯದ ಸಂಕೇತವಾಗಿದೆ. ಪರಸ್ಪರಲ್ಲಿನ ದ್ವೇಷ ಮರೆಸಿ, ಸಂಬಂಧ ಬೆಸೆಯುವ ಮತ್ತು ನಗಿಸಿ-ಕುಣಿಸುವ ಶ್ರೇಷ್ಠತೆಯ ಹಬ್ಬವಾಗಿದೆ. ಪ್ರಸ್ತುತ ಡಿಜೆ ಅಬ್ಬರ, ಸಂಸ್ಕಾರ ರಹಿತ ವರ್ತನೆ, ಸರಾಯಿ ಕುಡಿತದಿಂದ ಹಬ್ಬದ ಆಚರಣೆ ದಾರಿ ತಪ್ಪದಿರಲಿ ಎಂದು ಮನವಿ ಮಾಡಿದರು. ಈ ವೇಳೆ ಪುರಸಭೆ ಮಾಜಿ ಅಧ್ಯಕ್ಷೆ ಜಯಕ್ಕ ಅಂದಲಗಿ, ಎಂ.ಆರ್. ಪಾಟೀಲ, ನಿಂಗಪ್ಪ ಬನ್ನಿ, ಶಿವು ಕಟಗಿ, ನವೀನ ಬೆಳ್ಳಟ್ಟಿ, ಅನಿಲ ಮುಳಗುಂದ, ಶಕ್ತಿ ಕತ್ತಿ, ಬಸವರಾಜ ಚಕ್ರಸಾಲಿ, ಮಂಜುನಾಥ ಗೊರವರ ಮುಂತಾದವರಿದ್ದರು.

ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ಹತ್ತಿರ ಹಿಂದೂ ಸೇವಾ ಪ್ರತಿಷ್ಠಾನದ ಯುವಕರು ಮತ್ತು ಸೊಪ್ಪಿನಕೇರಿ ಓಣಿಯ ಸತಾನತ ಹಿಂದೂ ಯುವಕ ಮಂಡಳದಿಂದ ಯುವಕರು ರೇನ್ ಡ್ಯಾನ್ಸ್ ವ್ಯವಸ್ಥೆ ಮಾಡಿದ್ದರು. ಬಣ್ಣದ ಬಟ್ಟೆಯ ಪೆಂಡಾಲ್‌ನಲ್ಲಿ ಕೃತಕ ಮಳೆ ಸಿಂಚನ ಸೃಷ್ಟಿಸಿ ರಂಗಿನೋಕುಳಿ ಆಡಿದರು. ಬಿಸಿಲಿನ ಬೇಗೆಗೆ ರೇನ್ ಡ್ಯಾನ್ಸ್ ದೇಹ-ಮನಸ್ಸಿಗೆ ಮುದ ನೀಡಿತು. ಚಿತ್ರಕಲಾವಿದ ಪ್ರವೀಣ ಗಾಯಕರ ತಮ್ಮ ಕಲಾ ನೈಪುಣ್ಯತೆಯ ಮೂಲಕ ಯುವಕರು, ಮಕ್ಕಳ ಮುಖದಲ್ಲಿ ರಂಗು ತಂದರು.

> ಈ ನಡುವೆ ದ್ವಿತೀಯ ಪಿಯುಸಿ ಪರೀಕ್ಷೆಯಿದ್ದುದರಿಂದ ಪರೀಕ್ಷೆಯ ಬಳಿಕ ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ಮನೆ ತಲುಪಿಸುವ ಜವಾಬ್ದಾರಿಯನ್ನೂ ಪೊಲೀಸರು ನಿರ್ವಹಿಸಿದರು. ಮುನ್ನೆಚ್ಚರಿಕೆ ಕ್ರಮವಾಗಿ ಸಿಪಿಐ ನಾಗರಾಜ ಮಾಡಳ್ಳಿ ನೇತೃತ್ವದಲ್ಲಿ ಲಕ್ಷ್ಮೇಶ್ವರ, ಶಿರಹಟ್ಟಿ ಪೊಲೀಸ್ ಪಡೆ ಸೂಕ್ತ ಬಂದೋಬಸ್ತ್ ನಿರ್ವಹಿಸಿದರು

ಶಾಲಾ-ಕಾಲೇಜುಗಳ ಹೆಣ್ಣು ಮಕ್ಕಳು ಗೆಳತಿಯರ ಮನೆಗೆ ಹೋಗಿ ಬಣ್ಣ ಹಚ್ಚಿ ಸೆಲ್ಫಿಯೊಂದಿಗೆ ಖುಷಿಪಟ್ಟರು. ಸಣ್ಣ ಹುಡುಗರು ಅಣುಕು ಶವಯಾತ್ರೆ, ಹಲಗೆ ಬಾರಿಸುತ್ತಾ ಕುಣಿದು ಕುಪ್ಪಳಿಸಿದರು. ಪಟ್ಟಣದ ಬಸ್ತಿಬಣ, ಪೇಠಬಣ, ವಿನಾಯಕ ನಗರ, ರಂಭಾಪುರಿ ನಗರ, ಸರಾಫ ಬಜಾರ, ಅಂಬೇಡ್ಕರ ನಗರ, ಇಂದಿರಾನಗರ, ಡೋರ್ ಗಲ್ಲಿ, ಹುಲಗೇರಿಬಣ ಸೇರಿ ಹಲವೆಡೆ ಪ್ರತಿಷ್ಠಾಪಿಸಿದ್ದ ರತಿ-ಮನ್ಮಥರ ಮತ್ತು ಹುಲ್ಲುಗಾಮನ ಆಕೃತಿ ಮುಂದೆ ಬಣ್ಣ ಎರಚಿ ಹಲಗೆಯ ನಾದಕ್ಕೆ ಕುಣಿದು ಕೇಕೆ ಹಾಕಿ ಸಂಭ್ರಮಿಸಿದರು. ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಆವರಣದಲ್ಲಿ ನಿತ್ಯ ಯೋಗಾಭ್ಯಾಸ ಮಾಡುತ್ತಿರುವ ಯೋಗ ಸಮಿತಿ ಸದಸ್ಯರು ವಿಶೇಷವಾಗಿ ಬಣ್ಣದ ಹಬ್ಬ ಆಚರಿಸಿದರು.









## ವಿವಿಧೋದ್ದೇಶಗಳ ಸಂಘದ ಪದಾಧಿಕಾರಿಗಳ ಆಯ್ಕೆ





■ವಿಜಯಸಾಕ್ಷಿ ಸುದ್ದಿ, ಗದಗ

ನಂದೀಶ್ವರ ನಗರದ 2 ಮತ್ತು 3ನೇ ಕ್ರಾಸ್ (ಇಂಡೋರ್ ಸ್ಟೇಡಿಯಂ ಬಡಾವಣೆಯ) ನಾಗರಿಕರ ವಿವಿಧೋದ್ದೇಶಗಳ ಸಂಘದ ನೂತನ ಪದಾಧಿಕಾರಿಗಳನ್ನು ಇತ್ತೀಚೆಗೆ ಆಯ್ಕೆ ಮಾಡಲಾಯಿತು.

ಗೌರವ ಅಧ್ಯಕ್ಷರಾಗಿ ಜಿ.ಎಸ್. ಹಿರೇಮಠ, ಅಧ್ಯಕ್ಷರಾಗಿ ವಿಶ್ವನಾಥರೆಡ್ಡಿ ಗದ್ದಿಕೇರಿ, ಗೌರವ ಕಾರ್ಯದರ್ಶಿಯಾಗಿ ಬಸವರಾಜ ಎಚ್.ಕೊರ್ಲಹಳ್ಳಿ, ಉಪಾಧ್ಯಕ್ಷರಾಗಿ ಮಹೇಶ ರಂಗಣ್ಣವರ, ದೇವಪ್ಪ ನಡವಲಗುಡ್ಡ, ಶಿವಾನಂದ ಪಲ್ಲೇದ, ಜೆ.ವ್ಹಿ. ಹಿರೇಮಠ ಆಯ್ಕೆಯಾಗಿದ್ದಾರೆ.

ಕೋಶಾಧ್ಯಕ್ಷರಾಗಿ ಆರ್.ವ್ಹಿ. ಕರವೀರಮಠ, ಸಹ ಕಾರ್ಯದರ್ಶಿಯಾಗಿ ಡಾ. ಈರಣ್ಣ ಹಳೆಮನಿ, ಕೆ.ವ್ಹಿ. ಯಾಲಗಿಶೆಟ್ರು, ನೀಲಕಂಠಯ್ಯ ಕಳ್ಳಿಮಠ, ಅಶೋಕ ಮಾಳೆಕೊಪ್ಪ, ಸಂಘಟನಾ ಕಾರ್ಯದರ್ಶಿಯಾಗಿ ಡಾ. ಕೃಷ್ಣಾ ನಾವಳ್ಳಿ, ವ್ಹಿ.ವ್ಹಿ. ಕವಲೂರ, ಲಿಂಗರಾಜ ಗೊಲ್ಲರ, ಡಾ. ರವೀಂದ್ರ ನಂದಿ, ಕಾನೂನು ಸಲಹೆಗಾರರಾಗಿ ಎಸ್.ಜಿ. ಪಲ್ಲೇದ ಹಾಗೂ ಕಾರ್ಯಕಾರಿ ಮಂಡಳಿ ಸದಸ್ಯರಾಗಿ ಸುಭಾಸ ಗಡಾದ, ವ್ಹಿ.ಎಸ್. ಶಿವಕಾಳಿಮಠ, ಮಂಜುನಾಥ ಗಜಕೋಶ ಹಾಗೂ ಡಿ.ಬಿ. ಚೆನ್ನಶೆಟ್ಟರ ಆಯ್ಕೆಯಾಗಿದ್ದಾರೆ.

**ಶಿರಹಟ್ಟಿಯಲ್ಲಿ ಉಪಯೋಗಕ್ಕೆ ಬಾರದೇ ಬೀಕೋ ಎನ್ನುತ್ತಿರುವ ವಸತಿ ನಿಲಯ**

# 99 ಲಕ್ಷ ವ್ಯಯಿಸಿದ್ದು ಯಾವ ಪುರುಷಾರ್ಥಕ್ಕೆ?

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿಯ ಎಸ್‌ಸಿ/ಎಸ್‌ಟಿ ಸಮುದಾಯದ ಪದವಿ ಹಂತದ ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿಗಾಗಿ ನಿರ್ಮಿಸಲಾದ ಕಟ್ಟಡವು ನಿರ್ಮಾಣವಾಗಿ 8-9 ವರ್ಷಗಳು ಕಳೆಯುತ್ತಾ ಬಂದರೂ ಸಹ ಉಪಯೋಗಕ್ಕೆ ಬಾರದೇ, ಅನೈತಿಕ ಚಟುವಟಿಕೆಗಳಿಗಷ್ಟೇ ಬಳಕೆಯಾಗುತ್ತಿದ್ದು, ಲಕ್ಷಾಂತರ ರೂ ವ್ಯಯಿಸಿ ವಸತಿ ನಿಲಯ ನಿರ್ಮಿಸಿದ್ದು ಯಾವ ಪುರುಷಾರ್ಥಕ್ಕಾಗಿ ಎಂದು ಪ್ರಶ್ನಿಸುವಂತಾಗಿದೆ. ಕಾಲೇಜು ಶಿಕ್ಷಣ ಇಲಾಖೆ ವತಿಯಿಂದ 2013-14, 2014-15ನೇ ಸಾಲಿನ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಶಿರಹಟ್ಟಿ ಪ್ರಥಮದರ್ಜೆ ಕಾಲೇಜಿನ ಹಿಂಬದಿಯಲ್ಲಿ

> ತಾಲೂಕಿನ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿನಿಯರ ಪದವಿ ಹಂತದ ಶಿಕ್ಷಣಕ್ಕೆ ಪೂರಕವಾಗಬೇಕಿದ್ದ ವಸತಿ ನಿಲಯ ಕಾರ್ಯಾರಂಭವಾಗದೇ ಇರುವುದು ಮಾರಕವಾಗಿದೆ. ಇದರಿಂದ ಅನೇಕರು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಸಾರ್ವಜನಿಕರ ತೆರಿಗೆ ಹಣ ಇಲ್ಲಿ ಸದ್ಬಳಕೆಯಾದಂತೆ ಕಾಣುತ್ತಿಲ್ಲ. ಶೀಘ್ರವೇ ವಸತಿ ನಿಲಯ ಪ್ರಾರಂಭಕ್ಕೆ ಕ್ರಮ ಕೈಕೊಳ್ಳಬೇಕು.
>
> – ವಿಶ್ವನಾಥ ಕಪ್ಪತ್ತನವರ.
> ಜಿ.ಪಂ ಮಾಜಿ ಅಧ್ಯಕ್ಷ.



99.42 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣವಾಗಿರುವ ವಿದ್ಯಾರ್ಥಿನಿಯರ ವಸತಿ ನಿಲಯವು 2017ರಲ್ಲಿಯೇ ಮುಗಿದಿದ್ದು, ವಸತಿ ನಿಲಯಕ್ಕೆ ಅವಶ್ಯವಿರುವ ಮೂಲ ಸೌಲಭ್ಯಗಳು ಇಲ್ಲದ ಕಾರಣ ಈ ವಸತಿ ಶಾಲೆಯ ಕಟ್ಟಡವು ಇಲ್ಲಿಯವರೆಗೂ ಕಾರ್ಯಾರಂಭವಾಗಿಲ್ಲ. ಇತ್ತೀಚೆಗೆ ವಸತಿ ನಿಲಯವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಸತಿ ನಿಲಯವನ್ನು ಹಸ್ತಾಂತರಿಸಿದ್ದು, ಇನ್ನು ಕೆಲವು ಮೂಲಸೌಲಭ್ಯಗಳು ಆದ ನಂತರ ತಮ್ಮ ಸುಪರ್ದಿಗೆ ತೆಗೆದುಕೊಳ್ಳುವುದಾಗಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಹೇಳುತ್ತಿದ್ದಾರೆ. ಶಿರಹಟ್ಟಿ ತಾಲೂಕಿನಲ್ಲಿ ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರ ಪದವಿ ಹಂತದ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಲು ವಸತಿ ನಿಲಯವನ್ನು ಮಂಜೂರು ಮಾಡಿ ಅದಕ್ಕೆ ಅನುದಾನವನ್ನು ಸಹ ಬಿಡುಗಡೆಗೊಳಿಸಿತ್ತು. ಅದರಂತೆ ಕಟ್ಟಡ ನಿರ್ಮಾಣವಾಯಿತಾದರೂ ವಸತಿ ಶಾಲೆಗೆ ಮೂಲಸೌಲಭ್ಯ ಇಲ್ಲವೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ವಸತಿ ಶಾಲೆಯನ್ನು ಪ್ರಾರಂಭಿಸುವ ಗೋಜಿಗೆ ಹೋದಂತೆ ಕಾಣುತ್ತಿಲ್ಲ. ಒಂದು ವಸತಿ ಶಾಲೆಗೆ ಅವಶ್ಯಕವಿರುವ ಮೂಲಸೌಲಭ್ಯವನ್ನು ಕಲ್ಪಿಸದೇ ಬರೀ ವಸತಿ ನಿಲಯದ ಕಟ್ಟಡ ನಿರ್ಮಿಸಿದರೆ ಸರಕಾರದ ಅನುದಾನ ಸದ್ಬಳಕೆಯಾಗಲು ಸಾಧ್ಯವೇ, ವಸತಿ ಶಾಲೆ ಕೇವಲ ಅಂಕಿ-ಅಂಶಕ್ಕೆ ಸೀಮಿತವಾದರೆ ಸಾಕೇ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸರಕಾರದ ಸೌಲಭ್ಯದಿಂದ ವಂಚಿತರಾಗುತ್ತಿರುವದಕ್ಕೆ ಯಾರು ಹೊಣೆ ಎಂಬೆಲ್ಲ ಉತ್ತರವಿಲ್ಲದ ಪ್ರಶ್ನೆಗಳು ಮೂಡುವಂತಾಗಿದೆ. ವಸತಿ ಶಾಲೆಯು ವಿಶಾಲವಾದ ಜಾಗೆಯಲ್ಲಿ ನಿರ್ಮಾಣವಾಗಿದ್ದು, ಉಪಯೋಗಕ್ಕೆ ಬಾರದೇ ಇರುವುದರಿಂದ ಕಟ್ಟಡವು ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದೆ. ಸಮರ್ಪಕ ನಿರ್ವಹಣೆ ಇಲ್ಲದ್ದರಿಂದ ಕಿಟಕಿ ಗಾಜುಗಳು ಒಡೆದಿದ್ದು, ಸುತ್ತಲ್ಲೂ ಎಲ್ಲೆಂದರಲ್ಲಿ ಮದ್ಯದ ಪೌಚ್‌ಗಳು, ಬಾಟಲಿಗಳು, ಗಿಡ-ಗಂಟಿಗಳು ರಾರಾಜಿಸುತ್ತಿವೆ. ಈ ಕುರಿತು ಪ್ರತಿಕ್ರಿಯಿಸಿದ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮರಿಗೌಡ ಸುರಕೋಡ, 6 ತಿಂಗಳ ಹಿಂದೆ ವಸತಿ ನಿಲಯವನ್ನು ಇಲಾಖೆಯ ಸುಪರ್ದಿಗೆ ತೆಗೆದುಕೊಂಡಿದ್ದು, ವಿದ್ಯುತ್, ನೀರು, ಕಂಪೌಂಡ್ ಸೇರಿದಂತೆ ಅಗತ್ಯ ಮೂಲಸೌಲಭ್ಯ ಒದಗಿಸಿ ವಸತಿ ನಿಲಯವನ್ನು ಪ್ರಾರಂಬಿಸಲಾಗುವುದು ಎಂದಿದ್ದಾರೆ.

> ಈ ಕುರಿತು ಪ್ರತಿಕ್ರಿಯಿಸಿದ ಕರ್ನಾಟಕ ಪ್ರಜಾಪರ ವೇದಿಕೆಯ ತಾಲೂಕಾಧ್ಯಕ್ಷ ಹಸನ ತಹಸೀಲ್ದಾರ, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಶೀಘ್ರವೇ ವಸತಿ ಶಾಲೆ ಪ್ರಾರಂಭಿಸಬೇಕು. ಇಲ್ಲದಿದ್ದಲ್ಲಿ ಸಂಬಂಧಿಸಿದ ಇಲಾಖೆಯ ಎದುರು ವೇದಿಕೆ ವತಿಯಿಂದ ಪ್ರತಿಭಟನೆ ಮಾಡಲಾಗುವುದು ಎಂದರು.

# ರೈತರಿಗೆ ಹಣ ಜಮಾ ಮಾಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಂಬಲ ಬೆಲೆ ಯೋಜನೆಯಡಿ ಶೇಂಗಾ ಮಹಸೀಲು ಮಾರಾಟ ಮಾಡಿದ ರೈತರ ಖಾತೆಗೆ ಹಣ ಜಮೆ ಮಾಡುವಂತೆ ಕೃಷಿಕ ಸಮಾಜದ ತಾಲೂಕಾಧ್ಯಕ್ಷ ಚನ್ನಪ್ಪ ಷಣ್ಮುಕಿ ಬೆಂಗಳೂರಿಗೆ ತೆರಳಿ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಮುಖ್ಯ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.



ಮನವಿ ಪತ್ರದಲ್ಲಿ, ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ 2053 ಮೆಟ್ರಿಕ್ ಟನ್ ಶೇಂಗಾವನ್ನು ಬೆಂಬಲ ಬೆಲೆ(6783 ರೂ) ಯೋಜನೆಯಡಿ ಖರೀದಿಸಿ 2 ತಿಂಗಳು ಕಳೆಯುತ್ತಾ ಬಂದರೂ ಇದುವರೆಗೂ ರೈತರ ಖಾತೆಗೆ ಹಣ ಜಮೆಯಾಗಿಲ್ಲ. ಗದಗ ಜಿಲ್ಲೆಯಿಂದಲೇ 1464 ರೈತರು ಬೆಂಬಲ ಬೆಲೆಯಲ್ಲಿ ಮಾರಾಟ ಮಾಡಿದ್ದಾರೆ. ಮುಕ್ತ ಮಾರುಕಟ್ಟೆಯಲ್ಲಿ ಶೇಂಗಾ ಬೆಲೆ ಬಹಳಷ್ಟು ಕಡಿಮೆ ಇರುವ ಸಂದರ್ಭದಲ್ಲಿ ಬೆಂಬಲ ಬೆಲೆ ಯೋಜನೆ ರೈತರಿಗೆ ಆಸರೆಯಾಗಿದೆ. ಆದರೆ ಖರೀದಿ ಪ್ರಕ್ರಿಯೆ ಬಳಿಕ ಮೂರ್‍ನಾಲ್ಕು ದಿನಗಳಲ್ಲಿ ಡಿಬಿಟಿ ಮೂಲಕ ರೈತ ಖಾತೆಗೆ ಹಣ ಜಮೆ ಮಾಡುವ ನಿಯಮವಿದೆ. ಹತ್ತಿ, ಕಡಲೆ ಇತರೇ ಬೆಳೆಗಳನ್ನು ಬೆಂಬಲ ಬೆಲೆಯಡಿ ಮಾರಾಟ ಮಾಡಿದ 8/10 ದಿನಗಳಲ್ಲಿ ರೈತರ ಖಾತೆಗೆ ಹಣ ಜಮೆಯಾಗುತ್ತದೆ. ಆದರೆ ಎಣ್ಣೆಬೀಜದ ಬೆಳೆಗಳಾದ ಶೇಂಗಾ, ಕುಸುಬೆ ಬೆಳೆ ಮಾರಾಟ ಮಾಡಿ ತಿಂಗಳುಗಳೇ ಕಳೆದರೂ ರೈತರ ಖಾತೆಗೆ ಹಣ ಜಮೆಯಾಗದೇ ಸಂಕಷ್ಟ ಅನುಭವಿಸುವುದು ಪ್ರತಿವರ್ಷದ ಸಮಸ್ಯೆಯಾಗಿದೆ.

ಸದ್ಯದ ಪರಿಸ್ಥಿತಿಯಲ್ಲಿ ರೈತರು ಬ್ಯಾಂಕಿನ ಸಾಲ ಮರುಪಾವತಿಸಬೇಕು. ಜಮೀನು ವ್ಯವಹಾರ ಸೇರಿ ಹಣಕಾಸಿನ ಅಗತ್ಯತೆ ಸಾಕಷ್ಟಿರುತ್ತದೆ. ಆದ್ದರಿಂದ ಆದಷ್ಟು ಬೇಗ ರೈತರ ಖಾತೆಗೆ ಹಣ ಜಮೆ ಮಾಡಬೇಕು ಎಂದು ಖುದ್ದಾಗಿ ಅಧಿಕಾರಿಗೆ ಮನವಿ ಮಾಡಿದರು.

ಇದಕ್ಕೆ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಮುಖ್ಯ ವ್ಯವಸ್ಥಾಪಕರಾದ ಚಂದ್ರಕಾಂತ ಪಾಟೀಲ ಅವರು ತಕ್ಷಣದಲ್ಲಿಯೇ ಸಂಬಂಧಪಟ್ಟ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾ ಮಂಡಳದ ವ್ಯವಸ್ಥಾಪಕ ನಿರ್ದೇಶಕರಿಗೆ ರೈತರ ಮನವಿಯನ್ವಯ ಪತ್ರ ಬರೆದು ರೈತರ ಮನವಿ ಸ್ಪಂದಿಸುವ ಕೆಲಸ ಮಾಡಿದ್ದಾರೆ.

# ಸೂರಣಗಿ ಗ್ರಾ.ಪಂ ಅಧ್ಯಕ್ಷರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಸೂರಣಗಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಶಂಕ್ರಣ್ಣ ಶೀರನಹಳ್ಳಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ಸೂರಣಗಿ ಗ್ರಾ.ಪಂ ಅಧ್ಯಕ್ಷ ಸ್ಥಾನಕ್ಕೆ ಚನ್ನಮ್ಮ ಕಳ್ಳಿಹಾಳ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಬುಧವಾರ ಚುನಾವಣೆ ಪ್ರಕ್ರಿಯೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಶಂಕ್ರಣ್ಣ ಶೀರನಹಳ್ಳಿ ಹಾಗೂ ಪ್ರವೀಣ ಸೂರಣಗಿ ನಾಮಪತ್ರ ಸಲ್ಲಿಸಿದ್ದರು. ಒಟ್ಟು 20 ಸದಸ್ಯರನ್ನು ಹೊಂದಿರುವ ಗ್ರಾ.ಪಂ ಚುನಾವಣೆಯಲ್ಲಿ ಓರ್ವ ಸದಸ್ಯರು ಗೈರಾಗಿದ್ದರು. ಪ್ರವೀಣ ಸೂರಣಗಿ ನಾಮಪತ್ರ ವಾಪಾಸ್ ಪಡೆದಿದ್ದರಿಂದ ಚುನಾವಣಾಧಿಕಾರಿ ಕೃಷ್ಣಪ್ಪ ಧರ್ಮರ ಶಂಕ್ರಣ್ಣ ಶೀರನಹಳ್ಳಿ ಅವರ ಆಯ್ಕೆ ಘೋಷಿಸಿದರು. ಅಧ್ಯಕ್ಷರಾಗಿ ಆಯ್ಕೆಯಾದ ಶಂಕ್ರಣ್ಣ ಶೀರನಹಳ್ಳಿ ಅವರು ಮಾತನಾಡಿ, ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ಪಕ್ಷಾತೀತ, ಜಾತ್ಯಾತೀತವಾಗಿ ಎಲ್ಲ ಸದಸ್ಯರ ಸಹಕಾರದೊಂದಿಗೆ ಶ್ರಮಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಉಪಾಧ್ಯಕ್ಷೆ ಯಲ್ಲವ್ವ ಚಕ್ರಸಾಲಿ, ಚನ್ನಮ್ಮ ಕಳ್ಳಿಹಾಳ, ಹೆಗ್ಗಪ್ಪ ಹರಿಜನ, ಸುಮಂಗಲಾ ಮೇಲ್ಮುರಿ, ಶೇಖವ್ವ ದೊಡಗಣ್ಣವರ, ಪ್ರಕಾಶ ಶೀರನಹಳ್ಳಿ, ಲಕ್ಷ್ಮವ್ವ ಲಮಾಣಿ, ಸುಶೀಲಾ ಲಮಾಣಿ, ಫೀರಸಾಬ ರಿತ್ತಿ, ಕೋಟೆಪ್ಪ ವರ್ದಿ, ಶರಣಪ್ಪ ಇಚ್ಚಂಗಿ, ಬಾಬಣ್ಣ ಲಮಾಣಿ, ಹುಸೇನಸಾಬ ಕೋಲಕಾರ, ಶಂಕ್ರಪ್ಪ ದುರ್ಗದ, ಶಿವಾನಂದ ಲಮಾಣಿ ಮುಂತಾದವರಿದ್ದರು.

## ಬೈಕ್-ಕಾರು ಮುಖಾಮುಖಿ ಡಿಕ್ಕಿ: ಸ್ಥಳದಲ್ಲೇ ಇಬ್ಬರು ಸಾವು..!

■ವಿಜಯಸಾಕ್ಷಿ ಸುದ್ದಿ, ಯಾದಗಿರಿ

ಬೈಕ್-ಕಾರು ಮುಖಾಮುಖಿ ಡಿಕ್ಕಿಯಾಗಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಯಾದಗಿರಿ ಜಿಲ್ಲೆಯ ಶಹಾಪುರ ಪಟ್ಟಣದ ಜೇವರ್ಗಿ ರಸ್ತೆ ಬಳಿ ನಡೆದಿದೆ. ಸುರಪುರ ತಾಲೂಕಿನ ಚಾಮನಾಳ್ ಗ್ರಾಮದ ರಾಜು (31) ಹಾಗೂ ದೇವಿಂದ್ರ (22) ಮೃತ ದುರ್ದೈವಿಗಳಾಗಿದ್ದು, ಖಾಸಗಿ ಬ್ಯಾಂಕ್ ಒಂದರಲ್ಲಿ ಕೆಲಸ ಮಾಡ್ತಾ ಇದ್ದ ಮೃತರಿಬ್ಬರು, ಕೆಲಸ ಮುಗಿಸಿಕೊಂಡು ಶಹಾಪುರದಿಂದ ಚಾಮನಾಳ್ ಗೆ ಹೋಗುತ್ತಿದ್ದಾಗ ಕಲಬುರಗಿ ಕಡೆಯಿಂದ ಬರ್ತಾಯಿದ್ದ ಕಾರು ಬೈಕ್ ಗೆ ಡಿಕ್ಕಿ ಹೊಡೆದಿದೆ.


## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಟಕ ಜಾನಪದ ವಿಶ್ವ ವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು ಎಪ್ರಿಲ್ 21, 22 ಮತ್ತು 23 ರಂದು ಕರ್ನಾಟಕ ಜಾನಪದ ವಿಶ್ವ ವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆಯಲ್ಲಿ ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿ ಇರುವ 20 ರಿಂದ 45 ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಎಪ್ರಿಲ್ 5 ಆಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್ ಸೈಟ್ ಇಂ **http://karnatakasahithyaacademy.org** ದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.


## ನಿಧನ

**ನಿಂಗಪ್ಪ ಶಾನುಭೋಗರ**



**ಅಣ್ಣಿಗೇರಿ :** ಇಲ್ಲಿನ ಕೆರಿ ಓಣಿ ನಿವಾಸಿ ನಿಂಗಪ್ಪ ಮಲ್ಲಪ್ಪ ಶಾನುಭೋಗರ (69) ಇತ್ತೀಚೆಗೆ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಸಹೋದರರು, ಒಬ್ಬ ಸಹೋದರಿ ಸೇರಿದಂತೆ ಅಪಾರ ಬಂಧು ಬಳಗವಿದೆ.

**ರಾಮಣ್ಣ ನಿಡಗುಂದಿ**



**ಲಕ್ಕುಂಡಿ:** ಇಲ್ಲಿಯ ಕರಿಯವರ ಓಣಿಯ ನಿವಾಸಿ ಗ್ರಾ. ಪಂ ಮಾಜಿ ಸದಸ್ಯ ರಾಮಣ್ಣ ದ್ಯಾಮಣ್ಣ ನಿಡಗುಂದಿ (72) ಬುಧವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ 12 ಕ್ಕೆ ನೆರವೇರಲಿದೆ.



ಬೆಟಗೇರಿ : ಇಲ್ಲಿನ ಕುಲಕರ್ಣಿ ಗಲ್ಲಿ ನಿವಾಸಿ ಆನಂದಪ್ಪ ವೀರಪ್ಪ ಲಕ್ಕುಂಡಿ (75) ಇವರು ದಿ. 18 ರಂದು ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

**ಎಸ್.ಸಿ.ಎಸ್.ಪಿ-ಟಿ.ಎಸ್.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ**

# ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಹಂಚಿಕೆ ಯೋಜನೆಯಡಿ ಅರ್ಹ ಫಲಾನುಭವಿಗಳ ಆಯ್ಕೆ ಕೈಗೊಂಡು ಕಾಲಮಿತಿಯಲ್ಲಿಯೇ ಅವರಿಗೆ ಸೌಲಭ್ಯ ದೊರಕಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು. ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಬುಧವಾರ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಆಯಾ ಆರ್ಥಿಕ ಸಾಲಿನಲ್ಲಿ ಅನುಷ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನ ಲ್ಯಾಪ್ಸ್ ಆಗದಂತೆ ಹಾಗೂ ದುರ್ಬಳಕೆಯಾಗದಂತೆ ನೋಡಿಕೊಳ್ಳಬೇಕು. ಎಸ್‌ಸಿ-ಎಸ್‌ಟಿ ಕಾಲೋನಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಗುಣಮಟ್ಟದ ಕಡೆಗೂ ನಿಗಾವಹಿಸಬೇಕು ಎಂದರು. ಎಸ್‌ಸಿಪಿ ಟಿಎಸ್‌ಪಿ ಯೋಜನೆಗೆ ಬಿಡುಗಡೆಯಾದ ಅನುದಾನ ದುರ್ಬಳಕೆ, ದುರುಪಯೋಗ ಹಾಗೂ ನಿಗದಿತ ಪ್ರಮಾಣಕ್ಕಿಂತ ಕಡಿಮೆ ಬಳಕೆ ಆಗದೇ ಇರುವಂತೆ ಸಂಬಂಧಿತ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳುವುದು ಅವರ ಜವಾಬ್ದಾರಿಯಾಗಿರುತ್ತದೆ. ಇಲ್ಲದಿದ್ದಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಎಸ್‌ಸಿಟಿಎಸ್‌ಪಿ ಉಪಹಂಚಿಕೆ ಯೋಜನೆಯಡಿ ಜಿಲ್ಲೆಯಲ್ಲಿ ಇಲಾಖೆಗಳ ಪ್ರಗತಿ ಕುರಿತು ಸಭೆಗೆ ವಿವರಿಸಿದರು. ಈ ಸಂದರ್ಭದಲ್ಲಿ 12 ಇಲಾಖೆಗಳು ಶೇ.100ರಷ್ಟು ಪ್ರಗತಿ ಸಾಧಿಸಿದ್ದು, ಅಂತಹ ಇಲಾಖೆಗಳ ಸಾಧನೆಯನ್ನು ಜಿಲ್ಲಾಧಿಕಾರಿಗಳು ಪ್ರಶಂಸಿಸಿದರು. ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿದ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.



**ಗದಗ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳು**

# ಮಾರ್ಚ್ 22, 23ರಂದು ನಡೆಯುವ ಕ್ರೀಡಾಕೂಟಗಳ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಾರ್ಚ್ 22 ಮತ್ತು 23ರಂದು ಗದಗ ಜಿಲ್ಲಾ ಆಡಳಿತ, ಗದಗ ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಸಂಘಟಿಸಲಾಗುತ್ತಿದೆ. ಮಾರ್ಚ್ 22ರಂದು ಬೆಳಿಗ್ಗೆ 9 ಗಂಟೆಯೊಳಗಾಗಿ ನೌಕರರ ಕ್ರೀಡಾಪಟುಗಳು ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಮಹಿಳೆಯರಿಗಾಗಿ: ವಾಲಿಬಾಲ್, ಕಬಡ್ಡಿ, ಟೇಬಲ್ ಟೆನ್ನಿಸ್, ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್, ಕೇರಂ, ಬಾಲ್ ಬ್ಯಾಡ್ಮಿಂಟನ್, ಚೆಸ್, ಟೆನ್ನಿಕ್ವಾಯ್ಟ್, ಥ್ರೋಬಾಲ್, ಯೋಗ, ಖೋಖೋ.

ಪುರುಷರಿಗಾಗಿ: ಫುಟ್‌ಬಾಲ್, ವಾಲಿಬಾಲ್, ಹಾಕಿ, ಕಬಡ್ಡಿ, ಟೇಬಲ್ ಟೆನ್ನಿಸ್, ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್, ಕೇರಂ, ಬಾಲ್ ಬ್ಯಾಡ್ಮಿಂಟನ್, ಕ್ರಿಕೆಟ್, ಬಾಸ್ಕೆಟ್ ಬಾಲ್, ಚೆಸ್, ಟೆನ್ನಿಕಾಯ್ಟ್, ಯೋಗ, ಖೋಖೋ ಸ್ಪರ್ಧೆಗಳಿದ್ದು, ಥ್ರೋ ಬಾಲ್ ಮತ್ತು ಟೆನಿಕ್ವಾಯ್ಟ್ ಸ್ಪರ್ಧೆಗಳು ರಾಜ್ಯ ಮಟ್ಟದವರೆಗೆ ಮಾತ್ರ ನಡೆಯಲಿವೆ.




ಈಜು ಸ್ಪರ್ಧೆಗಳ ವಿವರ: ಪುರುಷರಿಗಾಗಿ ಫ್ರೀಸ್ಟೈಲ್, ಬ್ಯಾಕ್ ಸ್ಟ್ರೋಕ್, ಬ್ರೆಸ್ಟ್ ಸ್ಟ್ರೋಕ್, ಬಟರ್ ಪ್ಲೈ, ಇಂಡಿವಿಜುವಲ್ ಮಿಡ್ಲೆ, ಫ್ರೀಸ್ಟೈಲ್ ರಿಲೇ, ಮಿಡ್ಲೆರಿಲೇ, ಮಹಿಳೆಯರಿಗಾಗಿ ಫ್ರೀ ಸ್ಟೈಲ್, ಬ್ಯಾಕ್ ಸ್ಟ್ರೋಕ್, ಬ್ರೆಸ್ಟ್ ಸ್ಟ್ರೋಕ್, ಬಟರ್ ಪ್ಲೈ.

ವೆಟರನ್ಸ್ ಅಥ್ಲೇಟಿಕ್ಸ್: 40-50 ವರ್ಷ ಪುರುಷರ ವಿಭಾಗ-100ಮೀ ಓಟ, 400ಮೀ ಓಟ, 800ಮೀ ಓಟ, ಚಕ್ರ ಎಸೆತ, ಗುಂಡು ಎಸೆತ.

35-45 ವರ್ಷ ಮಹಿಳೆಯರ ವಿಭಾಗ-100ಮೀ ಓಟ, 200ಮೀ ಓಟ, 400ಮೀ ಓಟ, ಉದ್ದ ಜಿಗಿತ, ಚಕ್ರ ಎಸೆತ, ಗುಂಡು ಎಸೆತ.

50-60 ವರ್ಷ ಪುರುಷರ ವಿಭಾಗ-100ಮೀ ಓಟ, 400ಮೀ ಓಟ, 800ಮೀ ಓಟ, ಉದ್ದ ಜಿಗಿತ, ಚಕ್ರ ಎಸೆತ, ಗುಂಡು ಎಸೆತ.

45-60 ವರ್ಷ ಮಹಿಳೆಯರ ವಿಭಾಗ-100ಮೀ ಓಟ, 200ಮೀ ಓಟ, ಉದ್ದ ಜಿಗಿತ, ಚಕ್ರ ಎಸೆತ.

45 ವರ್ಷ ಮೇಲ್ಪಟ್ಟ ಪುರುಷರ ವಿಭಾಗ-ಬ್ಯಾಡ್ಮಿಂಟನ್ ಸಿಂಗಲ್ ಮತ್ತು ಡಬಲ್, ಟೇಬಲ್ ಟೆನಿಸ್ ಸಿಂಗಲ್, ಟೆನಿಸ್ ಸಿಂಗಲ್.

40 ವರ್ಷ ಮೇಲ್ಪಟ್ಟ ಮಹಿಳಯರ ವಿಭಾಗ-ಬ್ಯಾಡ್ಮಿಂಟನ್ ಸಿಂಗಲ್, ಟೇಬಲ್ ಟೆನಿಸ್ ಸಿಂಗಲ್, ಟೆನಿಕ್ವಾಯಿಟ್ ಸಿಂಗಲ್.

ಆಯ್ಕೆ ಕ್ರೀಡೆಗಳು: ಕುಸ್ತಿ, ಭಾರ ಎತ್ತುವ ಸ್ಪರ್ಧೆ, ಪವರ್ ಲಿಫ್ಟಿಂಗ್, ದೇಹದಾರ್ಢ್ಯ ಸ್ಪರ್ಧೆ.

ಸಂಗೀತ: ಹಿಂದೂಸ್ತಾನಿ, ಲಘು ಶಾಸ್ತ್ರೀಯ, ಕರ್ನಾಟಕ ಶಾಸ್ತ್ರೀಯ ಸಂಗೀತ, ಕರ್ನಾಟಕ ಲಘು ಶಾಸ್ತ್ರೀಯ ಸಂಗೀತ(ವೈಯಕ್ತಿಕ), ಜಾನಪದ ಗೀತೆಗಳು-ವೈಯಕ್ತಿಕ ಮತ್ತು ತಂಡ, ನೃತ್ಯ-ಕಥಕ್, ಮಣಿಪುರಿ, ಕುಚಿಪುಡಿ, ಕಥಕಳಿ, ಓಡಿಸ್ಸಿ, ಭರತನಾಟ್ಯ, ಜಾನಪದ ನೃತ್ಯ. ವಾದ್ಯ ಸಂಗೀತ-ಸ್ಟ್ರಿಂಗ್, ಹಿಂದೂಸ್ತಾನಿ, ಶಾಸ್ತ್ರೀಯ ಹಾಗೂ ಲಘು ಶಾಸ್ತ್ರೀಯ. ವಿಂಡ್ ವಾದ್ಯಗಳು-ಕರ್ನಾಟಕ ಶಾಸ್ತ್ರೀಯ ಹಾಗೂ ಲಘು, ಪರಕೇಷನ್ ವಾದ್ಯಗಳು-ಜನರಲ್. ಕರಕುಶಲ ವಸ್ತು ಪ್ರದರ್ಶನ-ಕಿರು ನಾಟಕ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇವರನ್ನು ಖುದ್ದಾಗಿ-ದೂರವಾಣಿ-08372-238345 ಹಾಗೂ ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಘಟಕ, ಗದಗ ಅಥವಾ ತಾಲೂಕು ಘಟಕ ಇವರಿಂದ ಪಡೆಯಬಹುದಾಗಿದೆ.

### ಅಥ್ಲೇಟಿಕ್ಸ್

ಪುರುಷರು-100 ಮೀ. ಓಟ, 200ಮೀ ಓಟ, 400ಮೀ ಓಟ, 800 ಮೀಟರ್, 1500 ಮೀ ಓಟ, 110 ಮೀ & 400 ಮೀ ಹರ್ಡಲ್ಸ್, 5000 ಮೀ ಓಟ, 10,000 ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಚಕ್ರ ಎಸೆತ, ಜಾವೆಲಿನ್ ಥ್ರೋ, 4*100 ಮೀ ರಿಲೇ, 4*4 ಮೀ ರಿಲೇ, ಹ್ಯಾಮರ್ ಥ್ರೋ.

ಮಹಿಳೆಯರು-100ಮೀ ಓಟ, 200ಮೀ ಓಟ, 400ಮೀ ಓಟ, 800ಮೀ ಓಟ, 110ಮೀ ಹರ್ಡಲ್ಸ್, ಉದ್ದ ಜಿಗಿತ, ಎತ್ತರ ಜಿಗಿತ, ಜಾವೆಲಿನ್ ಥ್ರೋ, ಚಕ್ರ ಎಸೆತ, ಗುಂಡು ಎಸೆತ, 4*100ಮೀ ರಿಲೇ, 4*4 ಮೀ ರಿಲೇ ಸ್ಪರ್ಧೆಗಳು ನಡೆಯಲಿವೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka